ಬೆಂಗಳೂರು, ಕೋಲಾರ, ಹಾಸನ, ಚಿತ್ರದುರ್ಗ, ದಾವಣಗೆರೆ, ವಿಜಯನಗರ, ಬಳ್ಳಾರಿ, ರಾಯಚೂರು, ವಿಜಯಪುರ, ಕಲಬುರ್ಗಿ

ದಶಕದ ನಡಿಗೆ... RNI No: KARKAN/2014/54928 ನೊಂದವರ ಧ್ವನಿ

# ಸಹಾಯ ವಾಣಿ

www.sahayavani.com SAHAYAVANI Postal Registration N.o KA/BGW--1862/2024-26 KANNADA DAILY PAPER ಕನ್ನಡ ದಿನಪತ್ರಿಕೆ

ಸಂಪುಟ: 11 Vol:11
ಸಂಚಿಕೆ: 127 Issuse:127
ದಿನಾಂಕ:23-06-2024 Date:23-06-2024
ರವಿವಾರ Sunday
ಪುಟ:4 Page:4
ರೂ.: 3-00 Rs.3-00

ಸಂಪಾದಕರು: ಎಸ್.ಕೆ.ಒಡೆಯರ್ ಉಪಸಂಪಾದಕರು: ಸುಚಿತ್ರ ಎಸ್. ಒಡೆಯರ್ ಎಂಬಿಎ ಗೌರವ ಸಂಪಾದಕರು: ಗುರುರಾಜು ಎಂ., ಫೋ: 080-31212322 ಮೊ.: 9902543494 E-mail:sahayavany@gmail.com

# ಟರ್ಫ್ ಕ್ಲಬ್ ಕುದುರೆ ರೇಸ್ ಅನುಮತಿ ಆದೇಶಕ್ಕೆ ಹೈಕೋರ್ಟ್ ತಡೆ



ಬೆಂಗಳೂರು:–

ಸಿಲಿಕಾನ್ ಸಿಟಿ ಬೆಂಗಳೂರಿನ ಟರ್ಫ್ ಕ್ಲಬ್‌ನಲ್ಲಿ (ರೇಸ್ ಕೋರ್ಸ್) ಕುದು–ರೆ ಪಂದ್ಯಗಳ ಆಯೋಜನೆಗೆ ನೀಡಿದ್ದ ಅನುಮತಿಗೆ ಏಕಸದಸ್ಯಪೀಠದ ಮಧ್ಯಂತರ ಆದೇಶಕ್ಕೆ ಹೈಕೋರ್ಟ್ ವಿಭಾಗೀಯ ಪೀಠ ತಡೆ ನೀಡಿದೆ.ರೇಸ್ ಕೋರ್ಸ್‌ನಲ್ಲಿ ಷರತ್ತುಗಳ ಅನ್ವಯ ಕುದುರೆ ಪಂದ್ಯಗಳನ್ನು ಆಯೋಜನೆ ಮಾಡುವುದಕ್ಕೆ ಅನುಮತಿ ನೀಡಿದ್ದ ಮಧ್ಯಂತರ ಆದೇಶ ಪ್ರಶ್ನಿಸಿ ಸರ್ಕಾರ ಸಲ್ಲಿಸಿದ್ದ ಮೇಲ್ಮನವಿ ವಿಚಾರಣೆ ಇಂದು ನಡೆಯಿತು. ಚಾದ–ಪ್ರತಿವಾದ ಆಲಿಸಿದ ಹೈಕೋರ್ಟಿನ ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ ಮತ್ತು ನ್ಯಾಯಮೂರ್ತಿ ಕೆ.ವಿ.ಅರವಿಂದ್ ಅವರಿದ್ದ ನ್ಯಾಯಪೀಠ ತಡೆ ವಿಧಿಸಿ ಆದೇಶ ನೀಡಿತು.ಇನ್ನೂ ವಿಚಾರಣೆ ಸಂದರ್ಭದಲ್ಲಿ ಸರ್ಕಾರವು ಮೇಲ್ಮನವಿಯಲ್ಲಿ ಕೋರಿರುವ ಅಂಶಗಳಲ್ಲಿ ಕುದುರೆ ಪಂದ್ಯಗಳ ಆಯೋಜಿಸದಂತೆ ಕೋರಿರುವುದಕ್ಕೆ ಬಲವಾದ ಕಾರಣಗಳನ್ನು ನೀಡಿದೆ. ಈ ನಿಟ್ಟಿನಲ್ಲಿ ಪಂದ್ಯಗಳ ಆಯೋಜನೆಗೆ ಅನುಮತಿ ನೀಡಿದ್ದ ಏಕಸದಸ್ಯ ಪೀಠದ ಆದೇಶವನ್ನು ಅಮಾನತ್ತಿಲ್ಲಿಟ್ಟಿರುವುದಾಗಿ ಪೀಠ ಉಲ್ಲೇಖಿಸಿದೆ.ಮುಖ್ಯವಾಗಿ ಅರ್ಜಿ ವಿಚಾರಣೆ –3ನೇ ಪುಟಕ್ಕೆ

## ಪ್ರಶ್ನೆ ಪತ್ರಿಕೆ ಸೋರಿಕೆ

## ಅಪರಾಧಿಗಳಿಗೆ 10 ವರ್ಷ ಜೈಲು, 1 ಕೋಟಿ ರೂ.ದಂಡ

ನವದೆಹಲಿ:–

ದೇಶದಲ್ಲಿ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿನ ಅವ್ಯವಹಾರ ಮತ್ತು ಅಕ್ರಮಗಳನ್ನು ತಡೆಗಟ್ಟಲು ಕೇಂದ್ರ ಸರ್ಕಾರ ಕಠಿಣಕಾನೂನು ಜಾರಿಗೆ ತಂದಿದ್ದು ಪ್ರಶ್ನೆಪತ್ರಿಕೆ ಸೋರಿಕೆ ಅಪರಾಧಿಗಳಿಗೆ ಗರಿಷ್ಠ 10 ವರ್ಷಗಳ ಜೈಲು ಶಿಕ್ಷೆ ಮತ್ತು 1 ಕೋಟಿ ರೂ.ವರೆಗಿನ ದಂಡ ವಿಧಿಸಲು ಮುಂದಾಗಿದೆ. ಸಾರ್ವಜನಿಕ ಪರೀಕ್ಷೆಗಳ ಅನ್ಯಾಯವಿಧಾನಗಳ ತಡೆ ಕಾಯಿದೆ, 2024ಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಒಪ್ಪಿಗೆ ನೀಡಿದ್ದು ಈ ಸಂಬಂಧಕೇಂದ್ರ ಶಿಕ್ಷಣ ಇಲಾಖೆ ತಡರಾತ್ರಿ ಅಧಿಸೂಚನೆ ಹೊರಡಿಸಿದ್ದು, ಹೊಸ ಕಾನೂನು ನಿನ್ನೆಯಿಂದಲೇ ಅನ್ವಯವಾಗಲಿದೆ. ಕೇಂದ್ರ ಲೋಕಸವಾ ಆಯೋಗ,ಸಿಬ್ಬಂದಿ ಆಯ್ಕೆ ಆಯೋಗ, ರೈಲ್ವೆ, ಬ್ಯಾಂಕಿಂಗ್ ನೇಮಕಾತಿ ಮತ್ತು ರಾಷ್ಟ್ರೀಯ ಪರೀಕ್ಷಾ ಸಭೆ ನಡೆಸುವ ಸಾರ್ವಜನಿಕ ಪರೀಕ್ಷೆಯಲ್ಲಿನ ಅಕ್ರಮ ತಡೆಗಟ್ಟಲು ಹೊಸ ನಿಯಮ ಜಾರಿ ಮಾಡಿದೆ. ಯುಜಿಸಿ, ನೀಟ್ 2024ರ ಪ್ರಶ್ನೆ ಪ್ರತಿಕೆ ಸೋರಿಕೆ ಹಿನ್ನೆಲೆಯಲ್ಲಿ ದೇಶಾದ್ಯಂತ ಪ್ರತಿಪಕ್ಷಗಳೂ ಸೇರಿದಂತೆ ಆಕಾಂಕ್ಷಿ ವಿದ್ಯಾರ್ಥಿಗಳಿಂದ ತೀವ್ರ ಪ್ರತಿಭಟನೆ ನಡೆದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಈ ಮಹತ್ವದ ನಿರ್ಧಾರ ತೆಗೆದುಕೊಂಡಿದೆ. “ಸಾರ್ವಜನಿಕ ಪರೀಕ್ಷೆಗಳಅನ್ಯಾಯ ವಿಧಾನಗಳ ತಡೆಗಟ್ಟುವಿಕೆ ಕಾಯಿದೆ, 2024 (1 ರ 2024ರ) ವಿಭಾಗ 1 ರ ಉಪ–ವಿಭಾಗ(2) ರ ಮೂಲಕ ನೀಡಲಾದ ಅಧಿಕಾರಗಳ ಅನುಷ್ಠಾನದಲ್ಲಿ, ಕೇಂದ್ರ ಸರ್ಕಾರ ಪ್ರಶ್ನೆ ಪತ್ರಿಕೆಸೋರಿಕೆ ಸಂಬಂಧಿಸಿದಂತೆ ಹೊಸ ಮತ್ತು ಕಠಿಣ ನಿಯಮ ಜಾರಿ ಮಾಡಲು ಮುಂದಾಗಿದೆ. ಸಾರ್ವಜನಿಕ ಪರೀಕ್ಷೆಗಳ ಅನ್ಯಾಯ ವಿಧಾನಗಳ ತಡೆ)ಮಸೂದೆ, 2024, ಫೆಬ್ರವರಿ 9 ರಂದು ರಾಜ್ಯಸಭೆಯಿಂದ ಅಂಗೀಕರಿಸಲ್ಪಟ್ಟಿತ್ತು. ಲೋಕಸಭೆ ಫೆಬ್ರವರಿ 6 ರಂದು ಅಂಗೀಕರಿಸಿತು. ರಾಷ್ಟ್ರಪತಿ ಮುರ್ಮು ಫೆಬ್ರವರಿ 12ರಂದು ಮಸೂದೆಗೆ ಅನುಮೋದನೆ ನೀಡಿದ್ದು ನಾಲ್ಕು ತಿಂಗಳೊಳಗೆ ಕಾನೂನಾಗಿ ಪರಿವರ್ತನೆ ಆಗಲಿದೆ.

### ಸಿಬಿಐ ತನಿಖೆ:

ಈ ನಡುವೆ ರಾಷ್ಟ್ರೀಯ ಪರೀಕ್ಷೆ ಸಂಸ್ಥೆ ಪ್ರಶ್ನೆ ಪತ್ರಿಕೆ ಸೋರಿಕೆ ಕುರಿತು ತನಿಖೆ ನಡೆಸಲು ಕೇಂದ್ರೀಯ ತನಿಖಾ ದಳ –ಸಿಬಿಐಗೆ ಮನವಿ ಮಾಡಿದೆ. ಜೂನ್ 4 ರಂದು ಎನ್‌ಟಿಎ ಪ್ರಕಟಿಸಿದ ವೈದ್ಯಕೀಯ ಪ್ರವೇಶ ಪರೀಕ್ಷೆ ನೀಟ್– ಯುಜಿ ಪರೀಕ್ಷೆಯಲ್ಲಿ ಅಕ್ರಮಗಳು ನಡೆದಿವೆ ಎಂದು ವಿರೋಧ ಪಕ್ಷಗಳು ಆರೋಪಿಸಿವೆ.

## ನೀಟ್ ಹಗರಣ ಕಠಿಣಕ್ರಮಕ್ಕೆ ಪ್ರಿಯಾಂಕಾ ಆಗ್ರಹ



ನವದೆಹಲಿ:–

ನೀಟ್ ಪ್ರಶ್ನೆಪತ್ರಿಕೆ ಹಗರಣ ಹಾಗೂ ಬಿಜೆಪಿ ಭ್ರಷ್ಟಾಚಾರದಿಂದ ದೇಶ ದುರ್ಬಲವಾಗಿದೆ ಎಂದು ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾಗ್ದಾಳಿ ನಡೆಸಿದ್ದಾರೆ. ನೀಟ್ ಪರೀ ಕ್ಷೆಯಲ್ಲಿ ನಡೆದಿರುವ ಹಗರ ಣದ ಬಗ್ಗೆ ಕಠಿಣ ಕ್ರಮಕೈಗೊಳ್ಳಬೇಕು. ಇದ–ರಿಂದ ಅನ್ಯಾಯವಾಗಿರುವ 24 ಲಕ್ಷ ವಿದ್ಯಾರ್ಥಿಗಳಿಗೆ ನ್ಯಾಯ ದೊರಕುವಂತಾಗಲಿದೆ ಎಂದು ಸಾಮಾಜಿಕ ಜಲತಾಣ ಎಕ್ಸ್‌ನಲ್ಲಿ ಅವರು ಆಗ್ರಹಿಸಿದ್ದಾರೆ. ಕಳೆದ 5 ವರ್ಷಗಳಲ್ಲಿ 43 ನೇಮಕಾತಿ ಪರೀಕ್ಷೆಗಳ ಪ್ರಶ್ನೆ ಪತ್ರಿಕೆಗಳು ಸೋರಿಕೆಯಾಗಿವೆ. ಇಂತಹ ಪ್ರಕರಣಗಳು ಬಿಜೆಪಿ ಆಡಳಿತದಲ್ಲಿ ರಾಷ್ಟ್ರೀಯ ಸಮಸ್ಯೆಯಾಗಿ ಮಾರ್ಪಟ್ಟಿದೆ ಎಂದು ಅವರು ದೂರಿದ್ದು, ಇದರಿಂದಾಗಿ ಕೋಟ್ಯಂತರ ಯುವಕರ ಭವಿಷ್ಯ ನಾಶವಾಗಿದೆ ಎಂದು ಕಿಡಿ–ಕಾರಿದ್ದಾರೆ.

ದೇಶವು ಅತೀ ಹೆಚ್ಚು ಯುವ ಜನತೆಯನ್ನು ಹೊಂದಿದೆ. ಈ ಯುವ ಜನರನ್ನು ಕೌಶಲ್ಯ ಮತ್ತು ಸಮರ್ಥರನ್ನಾಗಿ ಮಾಡುವ ಬದಲಿಗೆ ಅವರನ್ನು ಬಿಜೆಪಿ ಸರ್ಕಾರ ದುರ್ಬಲಗೊಳಿಸುತ್ತಿದೆ ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ. ವಿವಿಧ ಪರೀಕ್ಷೆಗಳಿಗಾಗಿ ಪ್ರತಿಭಾವಂತ ವಿದ್ಯಾರ್ಥಿಗಳು ಮೊದಲಿನಿಂದಲೂ ತಯಾರಿ ನಡೆಸಿರುತ್ತಾರೆ. ಖಾಲಿ ಇರುವ ಹುದ್ದೆಗಳ ನೇಮಕಾತಿಗಾಗಿ ವರ್ಷಗಟ್ಟಲೆ ಕಾಯುತ್ತಾರೆ. ಅರ್ಜಿ ಸಲ್ಲಿಸಲು ಸಾಕಷ್ಟು ಹಣ ಖರ್ಚು ಮಾಡುತ್ತಾರೆ. ಆದರೆ, ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ಭ್ರಷ್ಟಾಚಾರದಿಂದ ವಿದ್ಯಾರ್ಥಿಗಳ ಇಡೀ ಶ್ರಮ ವ್ಯರ್ಥವಾಗುತ್ತದೆ ಎಂದು ಅವರು ಟೀಕಿಸಿದ್ದಾರೆ.

## ಸೂರಜ್ ವಿರುದ್ಧದ ಆರೋಪ ದೂರು ಬಂದಿಲ್ಲ



ಬೆಂಗಳೂರು:–

ವಿಧಾನ ಪರಿಷತ್ ಸದಸ್ಯ ಸೂರಜ್‌ರೇವಣ್ಣ ವಿರುದ್ಧ ಕೇಳಿ ಬಂದಿರುವ ಆರೋಪಗಳ ಬಗ್ಗೆ ಯಾವುದೇ ದೂರು ಬಂದಿಲ್ಲ. ದೂರು ಬಂದ ಬಳಿಕ ಕ್ರಮ ತೆಗೆದುಕೊಳ್ಳುವುದಾಗಿ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟಪಡಿಸಿದರು. ಪ್ರಕರಣದ ಬೆಳವಣಿಗೆ ಗಮನಿಸಿ ಸಿಐಡಿಗೆ ಒಪ್ಪಿಸುವ ಕೆಲಸ ಮಾಡುವುದಾಗಿ ಅವರು ಹೇಳಿದರು.

ಸದಾಶಿವನಗರದಲ್ಲಿರುವ ತಮ್ಮ ನಿವಾಸದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮಗೆ ಪತ್ರವೂ ಬಂದಿಲ್ಲ. ನಮಗೆ ದೂರು ಬಂದಿಲ್ಲ. ಸೂರಜ್ ರೇವಣ್ಣ ಆಗಲಿ, ದೂರುದಾರನಾಗಲಿ ಎಲ್ಲಿಯೂ ದೂರು ಕೊಟ್ಟಿಲ್ಲ. ಯಾವುದೇ ಪೊಲೀಸ್ ಠಾಣೆಯಲ್ಲೂ ದೂರು ದಾಖಲಾಗಿಲ್ಲ. ಸೂರಜ್ ರೇವಣ್ಣ ಪರ ಶಿವಕುಮಾರ್ ಎಂಬುವರು ದೂರು ಕೊಟ್ಟಿ ರುವುದಾಗಿ ಹೇಳಿದರು.

ಈ ಪ್ರಕರಣವನ್ನು ಸಿಐಡಿಗೆ ಕೊಡುವ ಕುರಿತು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಮೊದಲು ಈ ಬಗ್ಗೆ ದೂರು ದಾಖಲಾಗಬೇಕು. ಪತ್ರ ಬರೆದ ತಕ್ಷಣ ಕ್ರಮಕೈಗೊಳ್ಳಲು ಆಗುವುದಿಲ್ಲ. ಅವರು ಪತ್ರ ಬರೆದಿರುವುದಾಗಿ ಹೇಳಿದ್ದಾರೆ. ಆದ–ರೆ, ತಮಗೆ ಯಾವುದೇ ಪತ್ರ ಬಂದಿಲ್ಲ. ಪ್ರಕರಣ ಏನಾಗುತ್ತದೆ ಎಂಬುದನ್ನು ಕಾದು ನೋಡುತ್ತೇವೆ. ಅಧಿಕೃತ ದೂರು ಬಂದ ಬಳಿಕ ಸಿಐಡಿಗೆ ಒಪ್ಪಿಸುವ ಕುರಿತು ನಿರ್ಧಾರ ಕೈಗೊಳ್ಳುವುದಾಗಿ ಹೇಳಿದರು.

## ಸೂರಜ್ ರೇವಣ್ಣ ಪ್ರಕರಣ ಕೇಳಬೇಡಿ:ಹೆಚ್‌ಡಿಕೆ ಸಿಡಿಮಿಡಿ



ಬೆಂಗಳೂರು:–

ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ ಅವರ ಅಸಹಜ ಲೈಂಗಿಕ ದೌರ್ಜನ್ಯ ಆರೋಪ ಕುರಿತು ತಮ್ಮ ಬಳಿ ಕೇಳಬೇಡಿ ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ ಕುಮಾರಸ್ವಾಮಿ ಗರಂ ಆಗಿದ್ದಾರೆ.

ನಿನ್ನೆಯಷ್ಟೆ ಈ ಪ್ರಕರಣ ಹೊರ ಬಿದ್ದ ಬೆನ್ನಲ್ಲೆ ಕೇಂದ್ರ ಸಚಿವರು ಈ ಕುರಿತು ಪ್ರತಿಕ್ರಿಯೆ ನೀಡಿದ್ದಾರೆ.

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನನಿಲ್ದಾಣದಲ್ಲಿ ಈ ಬಗ್ಗೆ ಸುದ್ದಿಗಾರರು ಕೇಳಿದ ಪ್ರಶ್ನೆಗೆ ಸಿಡಿಮಿಡಿಗೊಂಡರು. ದಯವಿಟ್ಟು ಇಂತಹ ವಿಷಯಗಳನ್ನು ನನ್ನ ಬಳಿ ಚರ್ಚೆ ಮಾಡಬೇಡಿ. ರಾಜ್ಯದ ಸಮಸ್ಯೆಗಳಿಗೆ ಸಂಬಂಧಪಟ್ಟ ವಿಚಾರಗಳನ್ನು ಮಾತ್ರ ಚರ್ಚೆ ಮಾಡಿ. ಅದರ ಅವಶ್ಯಕತೆ ಏನಿದೆ. ಕಾನೂನಿನ ಪ್ರಕಾರ ಎಲ್ಲವೂ ನಡೆಯಲಿದೆ. ಯಾವ ಕಾರಣಕ್ಕಾಗಿ ಇಂತಹ ಪ್ರಕರಣಗಳು ಬರುತ್ತಿದೆ ಎನ್ನುವುದು ಮುಂದಿನ ದಿನಗಳಲ್ಲಿ ಗೊತ್ತಾಗಲಿದೆ ಎಂದು ಅಚ್ಚರಿಯ ಹೇಳಿಕೆ ನೀಡಿದರು. –3ನೇ ಪುಟಕ್ಕೆ

## ಆಂಧ್ರಪ್ರದೇಶ: ನಿರ್ಮಾಣ ಹಂತದ ವೈಎಸ್‌ಆರ್‌ಸಿಪಿ ಕೇಂದ್ರ ಕಚೇರಿ ಧ್ವಂಸ: ಜಗನ್ ಕಿಡಿ



ಅಮರಾವತಿ:–

ಚಂದ್ರಬಾಬು ನಾಯ್ಡು ನೇತೃತ್ವದ ಎನ್‌ಡಿಎ ರಾಜ್ಯ ಸರ್ಕಾರ ಗುಂಟೂರು ಜಿಲ್ಲೆಯ ತಾಡೆಪಲ್ಲಿಯಲ್ಲಿ ನಿರ್ಮಾಣ ಹಂತದಲ್ಲಿರುವ ವಿರೋಧ ಪಕ್ಷದ ಕೇಂದ್ರ ಕಚೇರಿಯನ್ನು ಧ್ವಂಸಗೊಳಿಸಿದೆ ಎಂದು ವೈಎಸ್‌ಆರ್‌ಸಿಪಿ ಮುಖ್ಯಸ್ಥ ವೈಎಸ್ ಜಗನ್ ಮೋಹನ್ ರೆಡ್ಡಿ ಶನಿವಾರ ಹೇಳಿದ್ದಾರೆ. ಹೈಕೋರ್ಟ್ ಆದೇಶವನ್ನು ಧಿಕ್ಕರಿಸಿ ನೆಲಸಮಗೊಳಿಸಲಾಗಿದೆ ಎಂದು ರೆಡ್ಡಿ ಆರೋಪಿಸಿದ್ದಾರೆ.

ಈ ಕುರಿತು ಸಾಮಾಜಿಕ –3ನೇ ಪುಟಕ್ಕೆ

## ರಸ್ತೆ ಸುರಕ್ಷತೆಗೆ ರ್‍ಯಾಲಿ




ಬೆಂಗಳೂರು:–

ದೇಶದಲ್ಲಿ ಎಲ್ಲಾ ವಯೋಮಾನದವರ ಸಾವಿಗೆ ಕಾರಣವಾದ 12ನೇ ಮುಖ್ಯ ಕಾರಣವಾದ ರಸ್ತೆ ಸಂಚಾರ ನಿಯಮ ಪಾಲನೆ ಮತ್ತು ಹೆಲ್ಮೆಟ್‌ಗಳನ್ನು ಕಡ್ಡಾಯವಾಗಿ ಧರಿಸುವ ಮಹತ್ವ ಸಾರುವ ಸಂಚಾರ ಸುರಕ್ಷತೆ ರ್‍ಯಾಲಿ ಭಾರತ ಕಾರ್ಯಕ್ರಮಕ್ಕೆ ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್, ಹೀರೋ ಮೋಟೋಕಾರ್ಪ್ ಸಹಯೋಗದೊಂದಿಗೆ ಬೆಂಗಳೂರಿನ ಕಚೇರಿಯಲ್ಲಿ ಚಾಲನೆ ನೀಡಲಾಯಿತು.


‘ರೈಡ್ ಸೇಫ್ ಇಂಡಿಯಾ’ ಅಭಿಯಾನದ ವೇಳೆ ಬಿಬಿಎಂಪಿ ಮಾರ್ಷಲ್‌ಗಳು, ಪೊಲೀಸ್ ಸಿಬ್ಬಂದಿ, ಗಿಗ್ ವರ್ಕರ್‌ಗಳು ಮತ್ತು ವಿವಿಧ ಹಿನ್ನೆಲೆಯ ಜನರಿಗೆ ಹೆಲ್ಮೆಟ್‌ಗಳನ್ನು ವಿತರಿಸಲಾಯಿತು. ಹೆಲ್ಮೆಟ್‌ಗಳು ಹೇಗೆ ರಸ್ತೆ ಅಪಾಯಗಳನ್ನು ತಗ್ಗಿಸುತ್ತವೆ ಮತ್ತು ಜೀವಗಳನ್ನು ಉಳಿಸುತ್ತದೆ ಎಂಬುದನ್ನು ರ್‍ಯಾಲಿಯಲ್ಲಿ ಒತ್ತಿಹೇಳಲಾಯಿತು.

ಹೀರೋ ಮೋಟಾರ್ಸ್ ಸಹಯೋಗದಲ್ಲಿ ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ ಆಯೋಜಿಸಿದ್ದ ರೈಡ್ ಸೇಫ್ ಇಂಡಿಯಾ ಕಾರ್ಯಕ್ರಮದಲ್ಲಿ ಟ್ರಾಫಿಕ್ ಪೊಲೀಸರು ಮತ್ತು ಬಿಬಿಎಂಪಿ ಮಾರ್ಷಲ್‌ಗಳು ಭಾಗವಹಿಸಿದ್ದರು.

**ಟ್ರಾಮಾ ಕೇರ್ ಸೆಂಟರ್:**

ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ ನಿರ್ದೇಶಕಿ ಡಾ.ಪ್ರತಿಮಾ ಮೂರ್ತಿ ಅವರು ಅಪಘಾತದ ಪ್ರವೃತ್ತಿಯನ್ನು ಪರಿಣಾಮಕಾರಿಯಾಗಿ ಮೇಲ್ವಿಚಾರಣೆ ಮಾಡಲು ಮತ್ತು ಪರಿಹರಿಸಲು ನಗರದಲ್ಲಿ “ಆಘಾತ ನೋಂದಣಿ ಮತ್ತು ಆಘಾತ ಆರೈಕೆ ಕೇಂದ್ರಗಳ” –3ನೇ ಪುಟಕ್ಕೆ

## ಚಾಲಕನ ನಿರ್ಲಕ್ಷ್ಯ, ಚಲಿಸುತ್ತಿದ್ದ ಶಾಲಾ ವಾಹನದಿಂದ ಬಿದ್ದ ವಿದ್ಯಾರ್ಥಿಗಳು



ಗುಜರಾತ್:–

ಶಾಲೆಯಿಂದ ಮನೆಗೆ ಕರೆದೊಯ್ಯಲಾಗುತ್ತಿದ್ದ ಸ್ಕೂಲ್ ವ್ಯಾನ್ ನಿಂದ ಇಬ್ಬರು ವಿದ್ಯಾರ್ಥಿಗಳು ಕೆಳಗೆ ಬಿದ್ದಿರುವ ಘಟನೆ ಗುಜರಾತಿನ ವಡೋದರಾದಲ್ಲಿ ನಡೆದಿದೆ. ಇಬ್ಬರು ವಿದ್ಯಾರ್ಥಿನಿಯರು ತಮ್ಮ ಶಾಲಾ ಬ್ಯಾಗ್ ನೊಂದಿಗೆ ಕಾರಿನ ಹಿಂಬಾಗಿಲಿನಿಂದ ಹಠಾತ್ತನೆ ನಡುರಸ್ತೆಯಲ್ಲಿ ಬಿದ್ದಿರುವುದು ಸಿಸಿಟಿವಿಯಲ್ಲಿ ಸೆರೆಯಾಗಿದೆ. ಆದಾಗ್ಯೂ, ಚಾಲಕ ವ್ಯಾನ್ನು ವೇಗವಾಗಿ ಚಲಾಯಿಸಿಕೊಂಡು ಹೋಗಿದ್ದಾನೆ. ಈ ಸಂಬಂಧ ನಿರ್ಲಕ್ಷ್ಯ ಆರೋಪದ ಮೇರೆಗೆ ಇಬ್ಬರ ವಿರುದ್ಧ ವಿವಿಧ ಸೆ7ನ್ ಗಳ ಅಡಿಯಲ್ಲಿ ದೂರು ದಾಖಲಾಗಿದೆ. ಈ ಸಂಬಂಧ ವಡೋದರದ ಮಕರಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾ ಗಿದ್ದು, ಸ್ಕೂಲ್ ವ್ಯಾನ್ ಚಾಲಕ ಹಾಗೂ ಮಾಲೀಕನನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ನಿರ್ಲಕ್ಷ್ಯದ ಚಾಲನೆಗಾಗಿ ಸೆಕ್ಷನ್ 192 ಸಿಎ ಮತ್ತು ಸೆಕ್ಷನ್ 180, 184, 336, 279 ರ ಅಡಿಯಲ್ಲಿ ದೂರು ದಾಖಲಿಸಲಾಗಿದೆ. ಚಾಲಕನ ಕಲಿಕಾ ಚಾಲನಾ ಪರವಾನಗಿ ರದ್ದುಪಡಿಸುವ ಪ್ರಯತ್ನವನ್ನೂ ಮಾಡಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

## ಹಿರಿಯ ಲೇಖಕಿ ಕಮಲಾ ಹಂಪನಾ ನಿಧನ



ಬೆಂಗಳೂರು,ಜೂ.22:

ಹಿರಿಯ ಲೇಖಕಿ ನಾಡೋಜಾ ಪ್ರಶಸ್ತಿ ಪುರಸ್ಕೃತ ಸಾಹಿತಿ ಕಮಲಾ ಹಂಪನಾ ಹೃದಯಾಘಾತದಿಂದ ಇಂದು ಮುಂಜಾನೆ ನಿಧನರಾಗಿದ್ದಾರೆ. ಅವರಿಗೆ 89 ವರ್ಷ ವಯಸ್ಸಾಗಿತ್ತು.ಮೃತರು ಸಾಹಿತಿ ಮತ್ತು ಸಂಶೋಧಕರಾಗಿರುವ ಪತಿ ಹಂ.ಪಾ ನಾಗರಾಜಯ್ಯ ಇಬ್ಬರು ಪುತ್ರಿಯರು ಹಾಗೂ ಓರ್ವ ಪುತ್ರನನ್ನು ಅಗಲಿದ್ದಾರೆ. ವಯೋ ಸಹಜ ಕಾಯಿಲೆಯಿಂದ ಬಳಲುತ್ತಿದ್ದ ಕಮಲಾ ಅವರು ಅಮೆರಿಕನ್ ಡಾಲಸ್ ಕಾಲೋನಿಯಲ್ಲಿರುವ ಪುತ್ರಿ ಆರತಿ ನಿವಾಸದಲ್ಲಿ ವಾಸವಾಗಿದ್ದರು. ನಿನ್ನೆ ರಾತ್ರಿ ಅವರು 10 ಗಂಟೆ ಸುಮಾರಿಗೆ ಆವರು ಹೃದಯಾಘಾತಕ್ಕೊಳಗಾದರು. ಅವರನ್ನು ಎಂಎಸ್ ರಾಮಯ್ಯ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ನಿಧನರಾಗಿದ್ದಾರೆ. ರಾಜಾಜಿನಗರದಲ್ಲಿರುವ ಅವರ ನಿವಾಸದಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಕಲ್ಪಿಸಿದ ಬಳಿಕ ರವೀಂದ್ರಕಲಾಕ್ಷೇತ್ರದ ಹಿಂಭಾಗದಲ್ಲಿರುವ ಸಂಸ ರಂಗಮಂದಿರದಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಕಲ್ಪಿಸಲಾಗಿದೆ. ಅವರು ದೇಹವನ್ನು ರಾಮಯ್ಯ ಆಸ್ಪತ್ರೆಗೆ ದಾನ ಮಾಡಿದ್ದಾರೆ.ಕಮಲಾ ಹಂಪನಾ 60 ವರ್ಷಗಳ ಕಾಲ ಸಾಹಿತ್ಯ ಕ್ಷೇತ್ರದಲ್ಲಿ ತಮ್ಮದೇ ಛಾಪು ಮೂಡಿಸಿದ್ದಾರೆ. ಅಧ್ಯಯನ, ಅಧ್ಯಾಪನಾ, ಲೇಖನ, ಭಾಷಣ ಮತ್ತು ಸಂಶೋಧನೆಗಳ ಕ್ಷೇತ್ರದಲ್ಲಿ ಅವಿರತವಾಗಿ ಕಾರ್ಯನಿರ್ವಹಿಸಿದ್ದಾರೆ.ಹಂಪನಾ ಅವರ 60ಕ್ಕೂ ಹೆಚ್ಚು ಕೃತಿಗಳಲ್ಲಿ –3ನೇ ಪುಟಕ್ಕೆ

# ಸಾಂಕ್ರಾಮಿಕ ರೋಗ ವ್ಯಾಪಿಸದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಲು ಸೂಚನೆ



ಬೀದರ:–

ಮಳೆಗಾಲದಲ್ಲಿ ಜನರ ಆರೋಗ್ಯ ಕುರಿತು ಕಾಳಜಿ ವಹಿಸುವುದು ಅತ್ಯಂತ ಅವಶ್ಯಕವಾಗಿದೆ ಹೀಗಾಗಿ ವೈದ್ಯರು, ಪಿಡಿಒ ಅಧಿಕಾರಿಗಳು ಆಶಾ ಕಾರ್ಯಕರ್ತೆಯರ ಮೇಲೆ ಹೆಚ್ಚಿನ ಜವಾಬ್ದಾರಿ ಇದೆ ಎಲ್ಲ ಗ್ರಾಮಗಳಲ್ಲಿ ತಾವು ಜನರಲ್ಲಿ ಸ್ವಚ್ಛತೆ ಕುರಿತು ಜಾಗೃತಿ ಮೂಡಿಸಬೇಕು ಮೇಲಧಿಕಾರಿಗಳು ಸ್ವಚ್ಛತೆ ಕುರಿತು ಪರಿಶೀಲನೆ ನಡೆಸಬೇಕು ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ.ಶೈಲೇಂದ್ರ ಬೆಲ್ದಾಳೆ ಅವರು ಹೇಳಿದರು.

ಬೀದರ ತಾಲೂಕಾ ಪ್ರಗತಿ ಪರಿಶೀಲನಾ ಸಭೆ ಇಂದು ಬೀದರ ತಾಲೂಕಾ ಪಂಚಾಯತ ಕಚೇರಿ ಸಭಾಂಗಣದಲ್ಲಿಬೀದರ ದಕ್ಷಿಣ ಕ್ಷೇತ್ರದ ಶಾಸಕರರಾದ ಡಾ. ಶೈಲೇಂದ್ರ ಕೆ. ಬೆಲ್ದಾಳೆ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ವಿವಿಧ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಉದ್ಯೋಗ ಖಾತ್ರಿ ಯೋಜನೆ ಕುರಿತು ಜನರಲ್ಲಿ ಜಾಗೃತಿ ಮೂಡಿಸಿ, ಉದ್ಯೋಗ ಆಸಕ್ತರನ್ನು ಸೆಳೆಯುವ ಸಂಬಂಧ ಪ್ರಚಾರ ಕಾರ್ಯ ಕೈಗೊಳ್ಳಿ ಅಂಗನವಾಡಿ ಕಾರ್ಯಕರ್ತೆಯರು ಕೂಲಿ ಕಾರ್ಮಿಕರ ಮಕ್ಕಳಿಗೆ ಉತ್ತಮವಾಗಿ ಪಾಲನೆ ಪೊಷಣೆ ಮಾಡಬೇಕು ಉತ್ತಮ ಗುಣಮಟ್ಟದ ಆಹಾರ ಪದಾರ್ಥ ನೀಡಬೇಕು.

ಪಶುವೈದ್ಯಕೀಯ ಮತ್ತು ಮೀನುಗಾರಿಕೆ ಇಲಾಖೆ ಅಧಿಕಾರಿಗಳು ಜನರನ್ನು ಪಶುಗಳ ಮತ್ತು ಮೀನು ಪಾಲನೆ ಪೊಷಣೆಗಾಗಿ ಇರುವ ಅನುದಾನ ಕುರಿತು ಜನರಲ್ಲಿ ಅರಿವು ಮೂಡಿಸಬೇಕು ಸರ್ಕಾರದ ಅನುದಾನ ಎಲ್ಲ ರೈತರಿಗೂ ತಲುಪಬೇಕು ರೈತರು ಅನುದಾನದ ಮಾಹಿತಿ ಕೊರತೆಯಿಂದ ಫಲಾನುಭವಿಗಳು ರೈತರು ವಂಚಿತರಾಗುತಿದ್ದಾರೆ ಈ ಕುರಿತು ಗಮನ ಹರಿಸಬೇಕು ಎಂದರು.

ತಾಲೂಕಿನಲ್ಲಿ ಕೃಷಿ ಚಟುವಟಿಕೆಗಳು ಗರಿಗೆದರಿದ್ದು, ಇನ್ನು ಎಲ್ಲಿ ವಿತರಣೆ ಆಗಿಲ್ಲವೊ ಕೃಷಿ ಇಲಾಖೆಯಿಂದ ಪೂರೈಸುವ ಬೀಜ, ಗೊಬ್ಬರದ ಕೊರತೆ ಆಗದಂತೆ ಕ್ರಮಹಿಸಬೇಕು. ರೈತರಿಗೆ ಸರ್ಕಾರದಿಂದ ಸಿಗುತ್ತಿರುವ ಬೆಳೆ ವಿಮೆ ಹಣ, ಕಿಸಾನ್ ಸಮ್ಮಾನ್ ಯೋಜನೆ, ಪರಿಹಾರ ಧನ ಇಡೀ ಕ್ಷೇತ್ರದ ಜನರು ಈ ಹಣ ಸಮರ್ಪಕವಾಗಿ ರೈತರ ಖಾತೆಗೆ ತಲುಪುವಂತೆ ನೋಡಿಕೊಳ್ಳಬೇಕು ಎಂದರು.

ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ರಾಸಾಯನಿಕಯುಕ್ತ ಬೀಜ, ಗೊಬ್ಬರ ಬಿತ್ತನೆಗೆ ಮುಂದಾಗುತ್ತಿದ್ದು, ಭವಿಷ್ಯದಲ್ಲಿ ಭೂಮಿಯ ಸಂಪೂರ್ಣ ಫಲವತ್ತತೆ ಕ್ಷೀಣಿಸಿ ರಾಸಾಯನಿಕಯುಕ್ತ ಆಹಾರ ಪದಾರ್ಥಗಳ ಸೇವನೆಯಿಂದ ಮನುಷ್ಯನ ಆರೋಗ್ಯದ ಜತೆಗೆ ಮುಂಬರುವ ದಿನಗಳಲ್ಲಿ ಭೂಮಿಯ ಫಲವತ್ತತೆಯು ಹಾಳಾಗಲಿದೆ. ಹೀಗಾಗಿ ಭವಿಷ್ಯದ ಹಿತದೃಷ್ಟಿಯಿಂದ ತಾಲೂಕಿನ ಪ್ರತಿಯೊಬ್ಬ ರೈತರು ಸಾವಯುವ ಕೃಷಿಗೆ ಹೆಚ್ಚಿನ ಆದ್ಯತೆ ನೀಡುವಂತೆ ಅಧಿಕಾರಿಗಳು ರೈತರಿಗೆ ಮಾಹಿತಿ ನೀಡಿ ಎಂದರು. ಸಿರಿ ಧ್ಯಾನ್ಯಕ್ಕೆ ಹೆಚ್ಚಿನ ಉತ್ತೆಜನ ನೀಡಿ ಎಂದರು. ಕ್ಷೇತ್ರದಲ್ಲಿ ತೋಟಗಾರಿಕೆ ಬೆಳೆಗಳನ್ನು ಬೆಳೆಯುವ ರೈತರ ಸಂಖ್ಯೆ ಹೆಚ್ಚಾಗಬೇಕು. ಮುಂಬರುವ ದಿನಗಳಲ್ಲಿ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ತೋಟಗಾರಿಕೆ ಕ್ಷೇತ್ರ ವಿಸ್ತರಿಸಲು ಶಾಸಕರು ಸೂಚಿಸಿದರು.

ಎಲ್ಲ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಡೆಂಗ್ಯೂ,ಚಿಕನ್‌ಗುನ್ಯಾ,ಮಲೇರಿಯಾದಂತಹ ಸಾಂಕ್ರಾಮಿಕ ಕಾಯಿಲೆಯ ಪ್ರಕರಣಗಳು ಕಂಡು ಬರದಂತೆ ತಾಲೂಕು ಆಸ್ಪತ್ರೆ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು. ವೈದ್ಯರು ಸಣ್ಣಪುಟ್ಟ ವಿಷಯಗಳಿಗೂ ತಾಲೂಕಿನ ಬಡ ರೋಗಿಗಳನ್ನು ಬೀದರ್ ಬ್ರೀಮ್ಸ್ ಆಸ್ಪತ್ರೆಗೆ ಕಳುಹಿಸುತ್ತಿರುವುದು ಬೇಸರದ ಸಂಗತಿ. ಇಂತಹ ಘಟನೆಗಳು ಪುನರಾವರ್ತನೆ ಆಗದಂತೆ ಎಚ್ಚರವಹಿಸಬೇಕು ಎಂದು ತಿಳಿಸಿದರು. ಬೀದರ್ ದಕ್ಷಿಣ ಕ್ಷೇತ್ರದ ಸಿರ್ಸಿ ಎ, ಸಂಗೋಳಗಿ ಗ್ರಾಪಂಗಳ ಆಸ್ಪತ್ರೆಯಲ್ಲಿ ಹಲವು ದಿನಗಳಿಂದ ವೈದ್ಯರೆ ಇಲ್ಲ ಹೀಗಾದರೆ ಜನರು ಎಲ್ಲಿ ಚಿಕಿತ್ಸೆ ಪಡೆಯಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಳೆಗಾಲದಲ್ಲಿ ಕುಡಿಯುವ ನೀರು ನೈರ್ಮಲ್ಯ ಎಲಾಖೆ ಅಧಿಕಾರಿಗಳು ಎಲ್ಲ ಗ್ರಾಮಗಳಿಗೆ ಭೇಟಿ ನೀಡಿ ಕುಡಿಯುವ ನೀರು ಪರಿಶೀಲಿಸಿ ಎಲ್ಲ ಜನರಿಗೆ ಉತ್ತಮ ಶುದ್ಧ ಕುಡಿಯುವ ನೀರು ಸರಬರಾಜು ಕುರಿತು ಪರಿಶೀಲನೆ ನಡೆಸಬೇಕು. ಯಾವಗ್ರಾಮದಲ್ಲಿ ಎನೂ ಸಮಸ್ಯೆ ಎದೆ ಎನ್ನುವ ಕುರಿತು ಸಭೆಯಲ್ಲಿ ಮುಕ್ತವಾಗಿ ಹೇಳಲು ಅವಕಾಶ ನೀಡಿದರು ಬಳಿಕ ಸಮಸ್ಯೆಗಳ ಕುರಿತು ಸ್ಥಳದಲ್ಲಿದ್ದ ಅಧಿಕಾರಿಗಳು ಶೀಘ್ರ ಕ್ರಮ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಉಚಿತ ಬಸ್ ವ್ಯವಸ್ಥೆಯಿಂದ ಶಾಲೆಗೆ ತೆರಳುವ ವಿದ್ಯಾರ್ಥಿಗಳು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಅಂತಹ ಪರಿಸ್ಥಿತಿ ನಿವಾರಣೆಗೆ ಬಸ್ ಗಳನ್ನು ಹೆಚ್ಚಿಸಬೇಕು ಮತ್ತು ಯಾವ ಗ್ರಾಮದಲ್ಲಿ ಬಸ್ ವ್ಯವಸ್ಥೆ ಇಲ್ಲವೋ ಅಂತಹ ಗ್ರಾಮಗಳಿಗೆ ಬಸ್ ವ್ಯವಸ್ಥೆ ಕಲ್ಪಿಸಬೇಕು. ಅರಣ್ಯ ಇಲಾಖೆ ಅಧಿಕಾರಿಗಳು ಮಳೆಗಾಲದಲ್ಲಿ ಸಸಿ ನೆಡುವುದನ್ನು ಹೆಚ್ಚಿಸಬೇಕು ಇದರಿಂದ ಮಳೆ ಬೆಳೆ ಉತ್ತಮವಾಗುತ್ತದೆ ಎಂದರು. ರಸ್ತೆ, ಶೌಚಾಲಯ, ಇನ್ನಿತರ ಕಟ್ಟಡ ಕಾಮಗಾರಿ ಉತ್ತಮವಾಗಿ ಶೀಘ್ರ ಪೂರ್ಣಗೊಳಿಸಬೇಕು ಎಂದರು. ಸಭೆಗೂ ಪೂರ್ವದಲ್ಲಿ ಶಾಸಕರು ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಕಸ ವಿಲೇವಾರಿಯ ವಾಹನಕ್ಕೆ ಚಾಲನೆ ನೀಡಿದರು.ಈ ಸಂದರ್ಭದಲ್ಲಿ ಸಹಾಯಕ ಆಯುಕ್ತಕರಾದ ಲವೀಶ ಒರಡಿಯಾ, ತಾಪಂ ಇಒ ಕಿರಣ್ ಪಾಟೀಲ್ ಇದ್ದರು.

# ಯೋಗದಿಂದ ಮಾತ್ರ ಸದೃಢ ಆರೋಗ್ಯ



ಕಲಬುರಗಿ:–

ಪ್ರತಿದಿನವೂ ತಪ್ಪದೆ ನಿಯಮಿತವಾಗಿ ಯೋಗಭ್ಯಾಸ ಮಾಡುವುದರಿಂದ ಸದೃಢ ಆರೋಗ್ಯವಾಗಿರಲು ಸಾಧ್ಯ ಎಂದು ಗುಲಬರ್ಗಾ ವಿಶ್ವವಿದ್ಯಾಲಯದ ದೈಹಿಕ ಶಿಕ್ಷಣ ವಿಭಾಗದ ಯೋಗ ತರಬೇತುದಾರರಾದ ಡಾ. ಚಂದ್ರಕಾಂತ ಬಿರಾದಾರ ಅಭಿಪ್ರಾಯಪಟ್ಟರು.

ನಗರದ ಗೋದುತಾಯಿ ದೊಡ್ಡಪ್ಪ ಅಪ್ಪ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಪದವಿ ಮಹಿಳಾ ಮಹಾವಿದ್ಯಾಲಯದಲ್ಲಿ ಶುಕ್ರವಾರ 'ಸ್ವಂತ ಮತ್ತು ಸಮಾಜಕ್ಕಾಗಿ ಯೋಗ' ಎಂಬ ಧೇಯವಾಕ್ಯದ 10ನೇ ಅಂತರರಾಷ್ಟ್ರೀಯ ಯೋಗದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕವಾಗಿ ಯೋಗವು ಒಂದುಗೂಡಿಸುತ್ತದೆ. ಇದು ನಮ್ಮ ಪ್ರಾಚೀನ ಸಂಪ್ರದಾಯದ ಅಮೂಲ್ಯ ಕೊಡುಗೆ–ಯಾಗಿದೆ. ಯೋಗವು ಮನಸ್ಸು ಮತ್ತು ದೇಹ, ಆಲೋಚನೆ ಮತ್ತು ಕ್ರಿಯೆಯ ಏಕತೆಯನ್ನು ಒಳಗೊಂಡಿರುತ್ತದೆ. ಒತ್ತಡ, ಆತಂಕ ಮತ್ತು ಖಿನ್ನತೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಯೋಗವು ದೇಹದೊಡನೆ ಕಾರ್ಯ ನಿರ್ವಹಿಸುವುದಲ್ಲದೆ, ಆತ್ಮನನ್ನು ಸಾಕ್ಷಾತ್ಕರಿಸಿಕೊಳ್ಳುವ ಬೌದ್ಧಿಕತೆಯನ್ನು ಅಭಿವೃದ್ಧಿಗೊಳಿಸುತ್ತದೆ. ಶಿಸ್ತುಬದ್ಧ, ಸಂತೋಷದ ಜೀವನ ಮತ್ತು ರೋಗ ನಿರೋಧಕ ಶಕ್ತಿಯನ್ನು ಬೆಳೆಸುತ್ತದೆ. ವಿದ್ಯಾರ್ಥಿಗಳು ಯೋಗದೊಂದಿಗೆ ಸತ್ವ–ಯುತ ಆಹಾರ ಸೇವನೆ ಮಾಡಬೇಕು ಎಂದು ಸಲಹೆ ನೀಡಿದರು.

ಶರಣಬಸವೇಶ್ವರ ದೇವಸ್ಥಾನ ಆವರಣದ ಶಾಲಾ ಕಾಲೇಜುಗಳ ನಿರ್ದೇಶಕರಾದ ಡಾ.ನೀಲಾಂಬಿಕಾ ಶೇರಿಕಾರ ಮಾತನಾಡಿ, ಆಧುನಿಕ ಜೀವನಶೈಲಿ ಪದ್ಧತಿಯಿಂದ ಹಲವು ರೋಗಕ್ಕೆ ನಾವು ತುತ್ತಾಗುತ್ತಿದ್ದು, ಇದ–ರಿಂದ ಹೊರ ಬರಬೇಕಾದರೆ ಯೋಗದಿಂದ ಮಾತ್ರ ಸಾಧ್ಯ ಶರಣಬಸವೇಶ್ವರ ಸಂಸ್ಥಾನ ಯೋಗದ ಅಧ್ಯಾಯನಕ್ಕೆ ಹೆಚ್ಚು ಒತ್ತು ಕೊಡುತ್ತದೆ ಎಂದರು. ಮಹಾವಿದ್ಯಾಲಯದ ಪ್ರಾಚಾರ್ಯೆ ಡಾ.ಪುಟ್ಟಮಣಿ ದೇವಿದಾಸ ಮಾತನಾಡಿ, ವಿದ್ಯಾರ್ಥಿಗಳು ಸಮಯ ವ್ಯರ್ಥ ಮಾಡದೆ ಪ್ರತಿದಿನ ನಿಯಮಿತವಾಗಿ ಯೋಗ ಮಾಡುವುದನ್ನು ರೂಢಿಸಿಕೊಳ್ಳಿ ಇದರಿಂದ ನೀವು ಆರೋಗ್ಯವಾಗಿರುವುದಲ್ಲದೆ ಸಮಾಜವನ್ನು ಆರೋಗ್ಯವಾಗಿಡಲು ಸಹಾಯವಾಗುತ್ತದೆ ಎಂದು ಕಿವಿ ಮಾತು ಹೇಳಿದರು.

ವೇದಿಕೆ ಮೇಲೆ ಕಾಲೇಜಿನ ಎಎಎಸ್ ಅಧಿಕಾರಿಗಳಾದ ಶ್ರೀಮತಿ ಕಲ್ಪನಾ ಡಿ.ಮಹೇಂದ್ರಕರ್ ಮತ್ತು ಶ್ರೀಮತಿ ದೀಶಾ ಮೆಹತಾ ಇದ್ದರು.

ಕ್ರೀಡಾ ವಿಭಾಗದ ಪ್ರಾಧ್ಯಾಪಕ ಡಾ.ಮಿಲಿಂದ ಸುಳ್ಳದ ಸ್ವಾಗತಿಸಿದರೆ, ಕುಮಾರಿ ಜವೇರಿಯಾ ಅಂಜುಮ ನಿರೂಪಿಸಿ, ವಂದಿಸಿದರು. ಕು.ಪೂಜಾ ಪ್ರಾರ್ಥಿಸಿದರು.

# ಬಳ್ಳಾರಿಗೆ ನೂತನ ಮೇಯರ್ ಮುಲ್ಲಂಗಿ ನಂದೀಶ್



ಬಳ್ಳಾರಿ:–

ಒಮ್ಮತದ ಅಭ್ಯರ್ಥಿಯನ್ನು ಆಯ್ಕೆ ಮಾಡಲು ನಡೆದ ಹಲವು ಗೊಂದಲಗಳ ಮಧ್ಯೆ. ಪಾಲಿಕೆಯಲ್ಲಿ ಸ್ಪಷ್ಟ ಬಹುಮತ ಪಡೆದಿರುವ ಕಾಂಗ್ರೆಸ್ ಪಕ್ಷದ 18 ವಾರ್ಡಿನ ಸದಸ್ಯ ಮುಲ್ಲಂಗಿ ನಂದೀಶ್ ನೂತನ ಮೇಯರ್ ಆಗಿ ಮತ್ತು 26 ನೇ ವಾರ್ಡಿನ ಡಿ.ಸುಕುಂ ಅವರು ಉಪ ಮೇಯರ್ ಆಗಿ ಇಂದು ನಡೆದ ಚುನಾವಣೆಯಲ್ಲಿ ಆಯ್ಕೆಯಾಗಿದ್ದಾರೆ.

ಕಲ್ಬುರ್ಗಿಯ ಪ್ರಾದೇಶಿಕ ಆಯುಕ್ತ ಕೃಷ್ಣ ಬಾಜಪೇಯಿ ಅವರು ಚುನಾವಣೆ ನಡೆಸಿ ಆಯ್ಕೆ ಬಗ್ಗೆ ಘೋಷಣೆ ಮಾಡಿದರು.

ಮೇಯರ್ ಸ್ಥಾನಕ್ಕೆ ಸ್ಪರ್ಧೆ ಮಾಡಿದ್ದ ಕಾಂಗ್ರೆಸ್ ನಂದೀಶ್ ಅವರಿಗೆ 30 ಮತಗಳು ಬಂದರೆ. ಬಿಜೆಪಿಯಿಂದ ಸ್ಪರ್ಧೆ ಮಾಡಿದ್ದ ಶ್ರೀನಿವಾಸ್ ಮೋತ್ಕರ್ ಅವರಿಗೆ 14 ಮತಗಳು ಬಂದವು.

ಅದೇ ರೀತಿ ಉಪ ಮೇಯರ್ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ನ ಡಿ.ಸುಕುಂ ಅವರು 30 ಮತ ಪಡೆದ–ರೆ, ಬಿಜೆಪಿಯ ಚೇತನ ಅವರು 14 ಮತ ಪಡೆದರು.

ಮತದಾನದಲ್ಲಿ ಪಾಲಿಕೆ ಸದಸ್ಯರು, ರಾಜ್ಯ ಸಭಾ ಸದಸ್ಯ ಡಾ.ಸೈಯ್ಯದ್ ನಾಸೀರ್ ಹುಸೇನ್, ಲೋಕಸಭಾ ಸದಸ್ಯ ಇ.ತುಕರಾಂ, ಗ್ರಾಮೀಣ ಶಾಸಕ ಬಿ.ನಾಗೇಂದ್ರ, ನಗರ ಶಾಸಕ ಭರತ್ ರೆಡ್ಡಿ, ವಿಧಾನ ಪರಿಷತ್ ಸದಸ್ಯ ವೈ.ಎಂ.ಸತೀಶ್ ಅವರುಗಳು ಪಾಲ್ಗೊಂಡಿದ್ದರು.

ಗಟ್ಟಿ ನಾಯಕತ್ವದ ಕೊರತೆಯಿಂದ ಮೇಯರ್ ಸ್ಥಾನದ ಚುನಾವಣೆಗೆ ಒಮ್ಮತದ ಅಭ್ಯರ್ಥಿಯನ್ನು ಬೆಳಿಗ್ಗೆಯೇ ಆಯ್ಕೆ ಮಾಡಲು ಆಗದ ಕಾರಣ ಕಾಂಗ್ರೆಸ್ ನಿಂದಲೇ ನಾಲ್ವರು ಆಕಾಂಕ್ಷಿಗಳು ನಾಮಪತ್ರ ಸಲ್ಲಿಸಿದ್ದರು.

ಆಕಾಂಕ್ಷಿಗಳಾದ ಮುಲ್ಲಂಗಿ ನಂದೀಶ್, ಎಂ ಪ್ರಭಂಜನ್ ಕುಮಾರ್, ಪಿ. ಗಾದೆಪ್ಪ, ಮತ್ತು ಪೇರಂ ವಿಕ್ಕಿ ಮೇಯರ್ ಸ್ಥಾನಕ್ಕೆ. ಒಬಿಸಿ ಮಹಿಳೆಗೆ ಮೀಸಲಿದ್ದ ಉಪಮೇಯರ್ ಸ್ಥಾನಕ್ಕೆ ಇದೇ ಪಕ್ಷದ 26 ನೇ ವಾರ್ಡಿನ ಸದಸ್ಯೆ ಡಿ.ಸುಕುಂ ಒಬ್ಬರೇ ನಾಮಪತ್ರ ಸಲ್ಲಿಸಿದ್ದರು.

ನಂತರ ಮತ್ತೆ ಅಲ್ಲಂ ಹೊಟೇಲ್ ನಲ್ಲಿ ಸಭೆ ಸೇರಿ ನಾಮಪತ್ರ ಸಲ್ಲಿಸಿದ್ದ ನಾಲ್ವರಿಂದ ನಾಮಪತ್ರ ಹಿಂಪಡೆಯುವ ಪತ್ರ–ಕ್ಕೆ ಸಹಿಪಡೆದು. ನಂತರ ನಂದೀಶ್ ಅವರ ಹೆಸರನ್ನು ಅಂತಿಮಗೊಳಿಸಲಾಯ್ತು.

ನಿನ್ನೆ ರಾತ್ರಿ ವರೆಗೆ ಅಲ್ಲಂ ಹೊಟೇಲ್ ನಲ್ಲಿ ನಡೆದ ವೀಕ್ಷಕರ ಸಂಧಾನ ಸಭೆಯಲ್ಲೂ ಮೇಯರ್ ಬಗ್ಗೆ ಒಮ್ಮತಮೂಡಲಿಲ್ಲವಂತೆ.

ಇದಕ್ಕೂ ಮುನ್ನ ಜಿಂದಾಲ್ ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬಳಿ ಹೋದಾಗಲೂ ನಗರ ಶಾಸಕ ಭರತ್ ರೆಡ್ಡಿ ಅವರು ನಮ್ಮ ಬೆಂಲಿಗರಿಗೆ ಅಂದರೆ ಪ್ರಭಂಜನ್ ಅವರಿಗೆ ಅವಕಾಶ ಕೊಡಬೇಕು ಎಂದು ಸಿಎಂ ಅವರಿಗೆ ಗಟ್ಟಿ ಧ್ವನಿಯಲ್ಲಿ ಕೇಳಿದರಂತೆ.

ಅದಕ್ಕೆ ಸಿಎಂ ಸಿದ್ದರಾಮಯ್ಯ ಆಯ್ತು, ಯಾರು, ಯಾರು ಪಕ್ಷಕ್ಕೆ ಏನು ಮಾಡಿದ್ದಾರೆ ಎಂದು ಅರಿತು ಪಕ್ಷ ನಿರ್ಣಯ ತೆಗೆದುಕೊಳ್ಳುತ್ತೆ ಎಲ್ಲರೂ ಒಂದಾಗಿ ಹೋಗಿ ಎಂದು ಕಳಿಸಿದರಂತೆ.

ಇನ್ನು ಕಾಂಗ್ರೆಸ್ ನಲ್ಲಿ ಒಡಕೇನಾದಾರೂ ನಮಗೆ ಲಾಭ ಸಿಗಬಹುದು ಎಂಬ ನಿರೀಕ್ಷೆಯಲ್ಲಿ ಪಾಲಿಕೆಯ 44 ಮತಗಳಲ್ಲಿ 14 ಮತಗಳನ್ನು ಹೊಂದಿರುವ ಬಿಜೆಪಿಯಿಂದ ಮೇಯರ್ ಸ್ಥಾನಕ್ಕೆ ಶ್ರೀನಿವಾಸ್ ಮೋತ್ಕರ್ , ಉಪಮೇಯರ್ ಸ್ಥಾನಕ್ಕೆ ಚೇತನ ಆರೋಗ್ಯ ಸ್ಥಾಯಿ ಸಮಿತಿಗೆ ಕೆ.ಎಸ್.ಆಶೋಕ್ ಕುಮಾರ್ ನಾಮಪತ್ರ ಸಲ್ಲಿಸಿದ್ದರು.

# ವೀ.ವಿ.ಸಂಘದ ಮುನಿರಬಾದ್ ಕಾಲೇಜ್ ಲೀಜ್ 30 ವರ್ಷ ಮುಂದುವರಿಕೆಗೆ ಸರ್ಕಾರದ ಅನುಮತಿ




ಬಳ್ಳಾರಿ;–

ಕೊಪ್ಪಳ ಜಿಲ್ಲೆಯ ಮುನಿರಾಬಾದ್ ಗ್ರಾಮದಲ್ಲಿ ಇಲ್ಲಿನ ವೀರಶೈವ ವಿದ್ಯಾ ವರ್ಧಕ ಸಂಘ ನಡೆಸುತ್ತಿರುವ ವಿಜಯ ನಗರ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಲೀಸ್ ನ್ನು 30 ವರ್ಷಗಳ ಅವಧಿಗೆ ಮುಂದುವರೆಸಿ ನಿನ್ನೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ. ಕರ್ನಾಟಕ ನೀರಾವರಿ ನಿಗಮದ 2.70 ಎಕರೆ ಜಾಗದಲ್ಲಿ ಎರೆಡು ಕೋಟಿರೂ ಗಳಿಗೂ ಹೆಚ್ಚು ವೆಚ್ಚದಿಂದ ಇಲ್ಲಿ ಕಟ್ಟಡ ಕಟ್ಟಿರುವ ಸಂಘ. 1994 ರ ನಂತರ ಲೀಜ್ ಮುಂದುವರೆಸಿಕೊಂಡಿರಲಿಲ್ಲ. ಸಚಿವ ಸೋಮಣ್ಣರ ಪ್ರಭಾವ ಬಳಿಸಿ ಈ ಹಿಂದೆ ರಿನಿವಲ್ ಮಾಡಿತ್ತು. ಅದು ಈ ವರ್ಷಕ್ಕೆ ಮುಗಿಯುತ್ತಿತ್ತು.

ಮತ್ತೆ ಈಗ ಸಚಿವ ಶರಣ ಪ್ರಕಾಶ್ ಪಾಟೀಲ್ ಅವರ ಸಹಕಾರದಿಂದ 01.04.2023 ರಿಂದ 31.03.2053 ರವರೆಗೆ ಲೀಜ್ ನ್ನು ವಿಸ್ತರಿಸಲು ಅನುಮತಿನೀಡಿದೆ. ಆದರೆ ಈವರೆಗೆ ನಿಗಧಿಯಾಗಿದ್ದ ವಾರ್ಷಿಕ ಬಾಡಿಗೆಯನ್ನು 98 ಸಾವಿರಗಳಿಂದ 2 ಲಕ್ಷ ರೂಪಾಯಿಗೆ ಹೆಚ್ಚಿಸಿ ಸಚಿವ ಸಂಪುಟ ಅನುಮೋದನೆ ನೀಡಿದೆ.

ಇದಕ್ಕಾಗಿ ಸಂಘದ ಅಧ್ಯಕ್ಷ ಅಲ್ಲಂ ಗುರುಬಸವರಾಜ್, ಕಾರ್ಯದರ್ಶಿ ಅರವಿಂದ ಪಾಟೀಲ್, ಮಾಜಿ ಅಧ್ಯಕ್ಷ ರಾಮನಗೌಡ, ಅಜೀವ ಸದಸ್ಯ ಪ್ರಭುಸ್ವಾಮಿ ಅವರು ಸಚಿವ ಶರಣ ಪ್ರಕಾಶ್ ಅವರಿಗೆ ಧನ್ಯವಾದ ತಿಳಿಸಿದ್ದಾರೆ.

# ಶಾಲಾ ಮಕ್ಕಳಿಗೆ ಬುಕ್ ವಿತರಣೆ



ಮುದಗಲ್:–

ಹೊಂಗಿರಣ ಹಾಗೂ ಕ್ರಿತ್ಯಗತ ಸಂಸ್ಥೆಯಿಂದ ಸಮೀಪದ ಬನ್ನಿಗೋಳ ವಲಯ ವ್ಯಾಪ್ತಿಯಲ್ಲಿ ಬರುವ ಜನತಾಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಮಕ್ಕಳಿಗೆ ನೋಟ್ ಬುಕ್ ಪೆನ್ ಪೆನ್ಸಿಲ್ ವಿತರಣೆ ಮಾಡಿದರು. ಮುದಗಲ್ ವಲಯ ಶಿಕ್ಷಣ ಸಂಯೋಜಕ ಸಂತೋಷ ಕುಮಾರ ಮಾತನಾಡುತ್ತಾ 'ವಿಶೇಷವಾಗಿ ಸರ್ಕಾರಿ ಶಾಲೆಗಳಲ್ಲಿ ಬಡವರ ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿರುವುದನ್ನು ಗುರುತಿಸಿ ನೋಟ್ ಬುಕ್ ಪೆನ್ ಪೆನ್ಸಿಲ್ ಹಾಗೂ ನಲಿಕಲಿ ಮಕ್ಕಳಿಗೆ ಪರಿಕರಗಳು ದೇಣಿಗೆ ನೀಡಿರುವ ಹೊಂಗಿರಣ ಹಾಗೂ ಕ್ರಿತ್ಯಗತ ಸಂಸ್ಥೆಯ ಕಾರ್ಯ ಶ್ಲಾಘನೀಯವಾಗಿದೆ' ಎಂದು ಹೇಳಿದರು. ಮುಖ್ಯ ಶಿಕ್ಷಕ ಗುರುಬಸಪ್ಪ, ಶಾಲಾ ಸುಧಾರಣಾ ಸಮಿತಿ ಅಧ್ಯಕ್ಷ ಅಮರೇಗೌಡ ಪಾಟೀಲ, ಶಿಕ್ಷಕರಾದ ಮೌನೇಶ, ಪ್ರಶಾಂತ, ಯೋಗೇಶ, ಜ್ಯೋತಿ ಹುಡೇದ್ ಸೇರಿದಂತೆ ಶಾಲಾ ಮಕ್ಕಳು ಉಪಸ್ಥಿತರಿದ್ದರು.




# ನಿದ್ರಾಹೀನತೆಗೆ ಮನೆಮದ್ದು



1. ಹೂವನ್ನು ಹೊಟ್ಟೆಗೆ ಸೇವಿಸುವುದರಿಂದ ಅಥವಾ ಹೂವನ್ನು ತಲೆಯಲ್ಲಿ ಮುಡಿಯುವುದರಿಂದ ಸುಖವಾಗಿ ನಿದ್ದೆ ಬರುತ್ತದೆ.
2. ಬಾಳೆಹಣ್ಣನ್ನು ಸಿಪ್ಪೆ ಸಹಿತವಾಗಿ ಕತ್ತರಿಸಿ 1 ಲೋಟ ನೀರಿಗೆ ಹಾಕಿ ಚೆನ್ನಾಗಿ ಕುದಿಸಿ ಅರ್ಧ ಇಂಗಿದ ನಂತರ ಶೋಧಿಸಿಕೊಂಡು ಕುಡಿಯುವುದರಿಂದ ಚೆನ್ನಾಗಿ ನಿದ್ರೆ ಬರುತ್ತದೆ.
3. ಸಬ್ಬಸ್ಸಿಗೆ ಸೊಪ್ಪಿನ 2 ಕಡ್ಡಿಯನ್ನು ಮಲಗುವ ದಿಂಬಿನ ಹತ್ತಿರ ಇಟ್ಟು ಮಲಗಿದರೆ ಅದರ ವಾಸನೆಗೆ ಚೆನ್ನಾಗಿ ನಿದ್ರೆ ಬರುತ್ತದೆ.
4. ಬಿಸಿ ಮಾಡಿದ ಹರಳೆಣ್ಣೆಯನ್ನು ಕಣ್ಣಿನ ರೆಪ್ಪೆಯ ಮೇಲೆ ಸವರಿ ಮಲಗಿದರೆ ಸುಖವಾಗಿ ನಿದ್ರೆ ಬರುತ್ತದೆ.
5. ಕೊತ್ತಂಬರಿ ಸೊಪ್ಪಿನ ರಸಕ್ಕೆ ಸಕ್ಕರೆಯನ್ನು ಹಾಕಿ ಚೆನ್ನಾಗಿ ಪಾಕ ಬರುವವರೆಗೆ ಕುದಿಸಿ, ಆರಿಸಿ, ಗಾಜಿನ ಸೀಸೆಗೆ ಹಾಕಿಟ್ಟುಕೊಳ್ಳಿ. ಪ್ರತಿದಿನ ರಾತ್ರಿ 2 ಚಮಚ ಈ ಸಿರಪ್ ಅನ್ನು ನೀರಿಗೆ ಸೇರಿಸಿ ಷರಬತ್ತು ಮಾಡಿಕೊಂಡು ಕುಡಿದರೆ ಚೆನ್ನಾಗಿ ನಿದ್ರೆ ಬರುತ್ತದೆ.
6. ಮಲಗುವ ಮುನ್ನ ಬಿಸಿನೀರಿನ ಸ್ನಾನ ಮಾಡಿ ಬಿಸಿ ಹಾಲು ಕುಡಿದು ಮಲಗಿ ಸುಖವಾದ ನಿದ್ರೆ ಬರುತ್ತದೆ.
7. ರಾತ್ರಿ ಮಲಗುವಾಗ ಅಂಗಾತ ಮಲಗಿ ದೀರ್ಘವಾಗಿ ಉಸಿರಾಟ ಮಾಡಿ, ಹಲವಾರು ಬಾರಿ ಮಾಡಿ ನಂತರ ಎಡಪಕ್ಕಕ್ಕೆ ತಿರುಗಿ ಮಲಗಿದರೆ ನಿದ್ರೆ ಬರುತ್ತದೆ.
8. ಹುರುಳಿಕಾಳಿನ ಸಾರನ್ನು ತಿಂದರೆ ಸೊಗಸಾಗಿ ನಿದ್ರೆ ಬರುತ್ತದೆ.
9. ವಾರಕ್ಕೊಮ್ಮೆ ಅಭ್ಯಂಗ ಸ್ನಾನ ಮಾಡುವುದರಿಂದ ಸೊಗಸಾಗಿ ನಿದ್ರೆ ಬರುತ್ತದೆ.
10. ಹೆಸರುಬೇಳೆ ಪಾಯಸ ಮಾಡಿ ಕುಡಿದರೆ ಚೆನ್ನಾಗಿ ನಿದ್ರೆ ಬರುತ್ತದೆ.
11. ಗಸಗಸೆ ಪಾಯಸ ಮಾಡಿ ಕುಡಿಯುವುದರಿಂದಲೂ ನಿದ್ರೆ ಚೆನ್ನಾಗಿ ಬರುತ್ತದೆ.
12. ಸೌತೆಕಾಯಿಯನ್ನು ಅಥವಾ ಅದರ ತಿರುಳನ್ನು ಅಂಗಾಲಿಗೆ ಚೆನ್ನಾಗಿ ಹಾಕಿ ಉಜ್ಜಿದರೆ ನಿದ್ರೆ ಬರುತ್ತದೆ.

1. ಗೌರಮ್ಮನ ಆರೋಗ್ಯ ಸೂತ್ರಗಳು ಪ್ರಿಸ್ಮ್ ಬುಕ್ಸ್ ಪ್ರೈವೇಟ್ ಲಿಮಿಟೆಡ್ ವತಿಯಿಂದ ಪ್ರಕಟಣೆ
2. ಡಾ. ಗೌರಿ ಸುಬ್ರಮಣ್ಯ ಆಯುರ್ವೇದ ತಜ್ಞರು ಮತ್ತು ಧರ್ಮದರ್ಶಿಗಳು ಮುಕ್ತಿನಾಗ ದೇವಸ್ಥಾನ ಫೋನ್ ನಂ. 9535383921

# ರಬ್ಬಣಕಲ್ ಕುಡಿಯುವ ನೀರಿನ ಕೆರೆಯನ್ನು ತುಂಬಿಸುವುದಕ್ಕೆ ಅಗತ್ಯ ಕ್ರಮ : ರಾಜು ಪಿರಂಗಿ



ಮಾನ್ವಿ:–

ಮಾನ್ವಿ ಪಟ್ಟಣಕ್ಕೆ ಕುಡಿಯುವ ನೀರನ್ನು ಪೂರೈಸುವುದಕ್ಕಾಗಿ ರಬ್ಬಣಕಲ್ ನಲ್ಲಿ 86 ಎಕರೆಯಲ್ಲಿ ನಿರ್ಮಿಸಿರುವ ಕೆರೆಯನ್ನು ತುಂಬಿಸುವುದಕ್ಕೆ ತುಂಗಭದ್ರ ಜಲಾಶಯದಿಂದ ಕಾಲುವೆ ಮೂಲಕ ನೀರನ್ನು ಬಿಡಲಾಯಿತು.

ಪುರಸಭೆ ಮುಖ್ಯಾಧಿಕಾರಿ ಗಂಗಾಧರ ಹಾಗೂ ಕಿರಿಯ ಅರೋಗ್ಯ ನಿರೀಕ್ಷಕರಾದ ಮಹೇಶ್ ಹಾಗೂ ಪುರಸಭೆಯ ಸಿಬ್ಬಂದಿಗಳು ಕಾಲುವೆಯಿಂದ ಕೆರೆಗೆ ನೀರನ್ನು ಬಿಡುವುದಕ್ಕೆ ಶ್ರಮಿಸುತ್ತಿದ್ದಾರೆ.

ತಹಸೀಲ್ದಾರ್ ರಾಜು ಪಿರಂಗಿ ರಬ್ಬಣಕಲ್ ಕೆರೆಯನ್ನು ತುಂಬಿಸುತ್ತಿರುವುದನ್ನು ಪರಿಶೀಲಿಸಿ ಮಾತನಾಡಿ ಕಾಲುವೆ ಯಿಂದ ಕುಡಿಯುವ ನೀರಿಗಾಗಿ ನೀರನ್ನು ಕೆಲವೆ ದಿನಗಳ ಕಾಲ ಮಾತ್ರ ಬಿಡುತ್ತಿರುವುದರಿಂದ ಪುರಸಭೆ ಸಿಬ್ಬಂದಿಗಳು ಹಾಗೂ ಅಧಿಕಾರಿಗಳು ಕೆರೆ ತುಂಬಿಸುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್, ಕಂದಯ ನೀರಿಕ್ಷಕ ಚರಣ್ ಸಿಂಗ್ , ಯೋಜನ ನಿರ್ದೇಶಕರಾದ ಜಗದೀಶ್ ಗಂಗಣ್ಣ ನವರು ಸೇರಿದಂತೆ ಪುರಸಭೆಯ ಸಿಬ್ಬಂದಿಗಳು ಇದ್ದರು.

ಒಂದನೇ ಪುಟದಿಂದ

# ರಸ್ತೆ ಸುರಕ್ಷತೆಗೆ ರ್‍ಯಾಲಿ

ಅಗತ್ಯವನ್ನು ಎತ್ತಿ ತೋರಿಸಿದರು,

ಹೆಚ್ಚಿನ ಅಪಘಾತಗಳು ದ್ವಿಚಕ್ರ ವಾಹನ ಸವಾರರು, ಸೈಕ್ಲಿಸ್ಟ್‌ಗಳು ಮತ್ತು ಪಾದಚಾರಿಗಳ ಮೇಲೆ ಅವಲಂಬಿತವಾಗಿದೆ ಎಂದು ಡಾ ಪ್ರತಿಮಾ ಒತ್ತಿ ಹೇಳಿದರು, ದ್ವಿಚಕ್ರ ವಾಹನ ಸವಾರರು ಪ್ರಮಾಣಿತ ಹೆಲ್ಮೆಟ್ ಬಳಕೆಯ ನಿರ್ಣಾಯಕ ಅಗತ್ಯವನ್ನು ಒತ್ತಿ ಹೇಳಿದರು, ಕೇವಲ ಮೂರನೇ ಒಂದು ಭಾಗದಷ್ಟು ವ್ಯಕ್ತಿಗಳು ನಗರದಲ್ಲಿ ಸುರಕ್ಷತಾ ಮಾನದಂಡಗಳನ್ನು ಪೂರೈಸುವ ಹೆಲ್ಮೆಟ್‌ಗಳನ್ನು ಧರಿಸುತ್ತಾರೆ ಎಂದರು.

ಸಮಗ್ರ ನಗರ ಯೋಜನೆ, ಸುಧಾರಿತ ರಸ್ತೆ ಮೂಲಸೌಕರ್ಯ, ಸಂಚಾರ ಕಾನೂನುಗಳ ಕಟ್ಟುನಿಟ್ಟಾದ ಜಾರಿ, ದೃಢವಾದ ಸಾರ್ವಜನಿಕ ಶಿಕ್ಷಣ ಅಭಿಯಾನಗಳನ್ನು ಪ್ರತಿಪಾದಿಸಿದರು. ಎಲ್ಲಾ ಮಧ್ಯಸ್ಥಗಾರರನ್ನು ಒಳಗೊಂಡಿರುವ ಒಂದು ಸಂಘಟಿತ ವಿಧಾನಕ್ಕೆ ಕರೆ ನೀಡಿದರು. ರಸ್ತೆ ಸುರಕ್ಷತೆಯ ಉಪಕ್ರಮಗಳನ್ನು ಪರಿಣಾಮಕಾರಿಯಾಗಿ ಮೇಲ್ವಿಚಾರಣೆ ಮಾಡಲು ಮತ್ತು ಕಾರ್ಯಗತಗೊಳಿಸಲು ಮೀಸಲಾದ ರಾಷ್ಟ್ರೀಯ ಏಜೆನ್ಸಿಯನ್ನು ಸ್ಥಾಪಿಸಲು ಅವರು ಪ್ರಸ್ತಾಪಿಸಿದರು.

ವಾಹನ ಚಲಾಯಿಸುವಾಗ ಸರಿಯಾಗಿ ಹೆಲ್ಮೆಟ್ ಧರಿಸುವುದರ ಮಹತ್ವವನ್ನು ಒತ್ತಿ ಹೇಳಿದ ಸಾರಿಗೆ ಹೆಚ್ಚುವರಿ ಆಯುಕ್ತ ಜೆ ಪುರುಷೋತ್ತಮ, "ಪಟ್ಟಿ ಕಟ್ಟದೆ ಹೆಲ್ಮೆಟ್ ಧರಿಸುವುದು ಉಲ್ಲಂಘನೆಯಾಗಿದ್ದು, ಜೀವ ಉಳಿಸಲು ಪ್ರತಿಯೊಬ್ಬರೂ ಪಟ್ಟಿಯನ್ನು ಬಿಗಿಗೊಳಿಸಬೇಕು" ಎಂದು ಹೇಳಿದರು.

'ರೈಡ್ ಸೇಫ್ ಇಂಡಿಯಾ' ಅಭಿಯಾನ: ಯ 'ರೈಡ್ ಸೇಫ್ ಇಂಡಿಯಾ' ಅಭಿಯಾನ ನಿನ್ನೆ ಆರಂಭವಾಯಿತು. ವಾರವಿಡೀ ಖಿಓಖಇ ನಗರದ ವಿವಿಧ ಸ್ಥಳಗಳಲ್ಲಿ ರಸ್ತೆ ಸುರಕ್ಷತಾ ಉಪಕ್ರಮವನ್ನು ಆಯೋಜಿಸುತ್ತದೆ. ಗಿಗ್ ಕೆಲಸಗಾರರು, ಪೊಲೀಸ್ ಸಿಬ್ಬಂದಿ ಮತ್ತು ಇತರರಿಗೆ ರಸ್ತೆ ಸುರಕ್ಷತಾ ಕಿಟ್‌ಗಳನ್ನು ವಿತರಿಸುತ್ತದೆ. ಉಪಕ್ರಮದ ಭಾಗವಾಗಿ ನಾಳೆ ಜೂನ್ 23 ರಂದು ರಾಜಭವನದಿಂದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಬೈಕ್ ರ್‍ಯಾಲಿಗೆ ಚಾಲನೆ ನೀಡಲಿದ್ದಾರೆ. ರ್‍ಯಾಲಿಯು ಇನ್‌ಫೆಂಟ್ರಿ ರಸ್ತೆ, ವಿಧಾನಸೌಧ, ಕೆಆರ್ ಸರ್ಕಲ್, ನೃಪತುಂಗ ರಸ್ತೆ, ಕಸ್ತೂರ್ಬಾ ರಸ್ತೆ, ಎಂಜಿ ರಸ್ತೆ, ಕಬ್ಬನ್ ಮೂಲಕ ಸಾಗಿ ಕ್ವೀನ್ಸ್ ರಸ್ತೆಯಲ್ಲಿರುವ ಖಿಓಖಇ ಕಚೇರಿಯಲ್ಲಿ ಕೊನೆಗೊಳ್ಳುತ್ತದೆ.

## ಆಂಧ್ರಪ್ರದೇಶ: ನಿರ್ಮಾಣ ಹಂತದ ವೈಎಸ್‌ಆರ್‌ಸಿಪಿ ಕೇಂದ್ರ ಕಚೇರಿ ಧ್ವಂಸ: ಜಗನ್ ಕಿಡಿ

ಜಾಲತಾಣ ಎಕ್ಸ್ ನಲ್ಲಿ ಅವರು ಪೋಸ್ಟ್ ಮಾಡಿದ್ದು, ಚಂದ್ರಬಾಬು ನಾಯ್ಡು ಸೇಡಿನ ರಾಜ-ಕಾರಣ ಮಾಡ್ತಿದ್ದಾರೆ. ಬಹುತೇಕ ಪೂರ್ಣಗೊಂಡಿದ್ದ ವೈಎಸ್ ಆರ್ ಸಿಪಿ ಕೇಂದ್ರ ಕಚೇರಿಯನ್ನು ಸರ್ವಾಧಿಕಾರಿಯಂತೆ ಯಂತ್ರಗಳು ಮತ್ತು ಬುಲ್ಡೋಜರ್‌ಗಳಿಂದ ವೈಎಸ್‌ಆರ್‌ಸಿಪಿಯ ಕೇಂದ್ರ ಕಚೇರಿಯನ್ನು ಕೆಡವಿದ್ದಾರೆ ಎಂದು ಕಿಡಿಕಾರಿದ್ದಾರೆ.

ಶನಿವಾರ ಮುಂಜಾನೆ 5.30ರ ಸುಮಾರಿಗೆ ಧ್ವಂಸ ಕಾರ್ಯಾಚರಣೆ ಪ್ರಾರಂಭವಾಗಿದೆ. "ಸಿಆರ್‌ಡಿಎ (ರಾಜಧಾನಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ) ದ ಕ್ರಮಗಳನ್ನು ಪ್ರಶ್ನಿಸಿ ವೈಎಸ್‌ಆರ್‌ಸಿಪಿ ಶುಕ್ರವಾರ ಹೈಕೋರ್ಟ್‌ಗೆ ಮೊರೆ ಹೋ. ಯಾವುದೇ ಧ್ವಂಸ ಕಾರ್ಯಾಚರಣೆ ನಡೆಯದಂತೆ ಕೋರ್ಟ್ ಆದೇಶ ನೀಡಿತ್ತು.ಆದರೆ, ಪ್ರಾಧಿಕಾರ ಹಿಂದೆ ಸರಿದಿದ್ದು, ಕಟ್ಟಡವನ್ನು ಧ್ವಂಸಗೊಳಿಸಿದೆ ಎಂದು ವೈಎಸ್ ಆರ್ ಸಿಪಿ ಹೇಳಿದೆ.

ಸಿಆರ್‌ಡಿಎ ಕ್ರಮವು ನ್ಯಾಯಾಂಗ ನಿಂದನೆಗೆ ಸಮಾನವಾಗಿದೆ. ಟಿಡಿಪಿ, ಬಿಜೆಪಿ ಮತ್ತು ಜನಸೇನಾ ಒಳಗೊಂಡಿರುವ ಎನ್‌ಡಿಎ ಸರ್ಕಾರದ ಅಡಿಯಲ್ಲಿ ದಕ್ಷಿಣ ರಾಜ್ಯದಲ್ಲಿ ಕಾನೂನು ಮತ್ತು ನ್ಯಾಯ ಸಂಪೂರ್ಣವಾಗಿ ಕಣ್ಮರೆಯಾಗಿದೆ. ಧ್ವಂಸವು ನಾಯ್ಡು ಅವರ ಮುಂದಿನ ಐದು ವರ್ಷಗಳ ಆಳ್ವಿಕೆಯನ್ನು ಸೂಚಿಸುತ್ತದೆ. ಈ ಸೇಡಿನ ರಾಜಕಾರಣಕ್ಕೆ ವಿರೋಧ ಪಕ್ಷ ಬೆದರುವುದಿಲ್ಲ .ಪಕ್ಷ ಜನರಿಗಾಗಿ ಹೋರಾಟ ನಡೆಸಲಿದೆ ಎಂದು ಜಗನ್ ಮೋಹನ್ ರೆಡ್ಡಿ ಭರವಸೆ ನೀಡಿದ್ದಾರೆ.

## ಹಿರಿಯ ಲೇಖಕಿ ಕಮಲಾ ಹಂಪನಾ ನಿಧನ

ಕತೆಗಳು, ಸೃಜನ ಕೃತಿಗಳೂ ಸೇರಿವೆ. ಬಿಂದಲಿ, ಬುಗುಡಿ ಹಾಗೂ ಬಯಲು ಇವು ಆಧುನಿಕ ವಚನಗಳ ಸಂಕಲನವಾಗಿವೆ. ಮೂಡಬಿದಿರೆಯಲ್ಲಿ ನಡೆದ 71ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿದ್ದರು.

ಸರ್ಕಾರ ಸಾಹಿತ್ಯ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆಗೆ ಕೊಡಮಾಡುವ ದಾನಚಿಂತಾಮಣಿ ಅತ್ತಿಮಬ್ಬೆ ಪ್ರಶಸ್ತಿ ಹಂಪಿ ಕನ್ನಡ ವಿವಿ ನೀಡುವ ನಾಡೋಜಾ ಪ್ರಶಸ್ತಿ ಲಭಿಸಿದೆ.

ಹಂಪನಾ ಅವರ ಸಮಗ್ರ ಸಾಹಿತ್ಯವನ್ನೊಳಗೊಂಡ 9 ಬೃಹತ್ ಸಂಪುಟಗಳು ಹೊರ ಬಂದಿವೆ. ಸಂಶೋಧನೆಗೆ ಹೆಚ್ಚಿನ ಆದ್ಯತೆ ನೀಡಿದ್ದರು. ಕನ್ನಡ ಸಾರ್ವಸತ ಲೋಕಕ್ಕೆ ತಮ್ಮದೇ ಕೊಡುಗೆ ನೀಡಿರುವ ಹಂಪನಾ ಅವರು ಇನ್ನು ನೆನಪು ಮಾತ್ರ.

**ಸಿಎಂ ಕಂಬನಿ:**

ಹಿರಿಯ ಸಾಹಿತಿ ಡಾ. ಕಮಲಾ ಹಂಪನಾ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.ಸಾಹಿತ್ಯ ಕೃಷಿಯ ಜತೆ ಸಂಶೋಧನೆ ಮತ್ತು ಬೋಧನೆಗಳಿಂದಲೂ ಜನಪ್ರಿಯರಾಗಿದ್ದರು. ಅವರದ್ದು ಸರ್ವರಿಗೂ ಒಳಿತನ್ನು ಬಯಸುವ ಜೀವ. ಡಾ. ಹಂಪನಾ ನಾಗರಾಜಯ್ಯ ಮತ್ತವರ ಕುಟುಂಬದ ದುಃಖದಲ್ಲಿ ತಾವು ಭಾಗಿಯಾಗಿದ್ದೇನೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಪ್ರಾರ್ಥಿಸಿದ್ದಾರೆ.

## ಸೂರಜ್ ರೇವಣ್ಣ ಪ್ರಕರಣ ಕೇಳಬೇಡಿ:ಹೆಚ್‌ಡಿಕೆ ಸಿಡಿಮಿಡಿ

ಇದೇ ವೇಳೆ ಚನ್ನಪಟ್ಟಣದ ಉಪಚುನಾವಣೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸ್ಪರ್ಧೆ ಕುರಿತು ಪ್ರತಿಕ್ರಿಯಿಸಿದ ಅವರು, ಚನ್ನಪಟ್ಟಣದಲ್ಲಿ ಯಾರೂ ಬೇಕಾದರು ನಿಲ್ಲಲಿ. ಡಿಕೆಶಿಯಾದರು ನಿಲ್ಲಲ್ಲಿ ಅಥವಾ ಅವರ ಜತೆಗೆ ಇನ್ನೂ 4 ಜನರನ್ನು ಕರೆದುಕೊಂಡು ಬಂದು ನಿಲ್ಲಿಸಿಕೊಳ್ಳಲಿ. ಪ್ರಜಾಪ್ರಭುತ್ವದಲ್ಲಿ ಯಾರು ಬೇಕಾದರು ನಿಲ್ಲಬಹುದು, ಅದಕ್ಕೆ ದೊಡ್ಡ ಮಹತ್ವ ಕೊಡುವುದು ಬೇಡ, ಜೆಡಿಎಸ್ ಅಭ್ಯರ್ಥಿ ಸ್ಪರ್ಧಿಸುವ ಕುರಿತು ಮುಂದಿನ ದಿನಗಳಲ್ಲಿ ನಿರ್ಧಾರವಾಗಲಿದೆ ಎಂದರು.

## ಟರ್ಫ್ ಕ್ಲಬ್ ಕುದುರೆ ರೇಸ್ ಅನುಮತಿ ಆದೇಶಕ್ಕೆ ಹೈಕೋರ್ಟ್ ತಡೆ

ಪೂರ್ಣಗೊಳಿಸುವವರೆಗೂ ಬೆಂಗಳೂರು ಟರ್ಫ್ ಕ್ಲಬ್‌ನಲ್ಲಿ ಆನ್ ಕೋರ್ಸ್ ಮತ್ತು ಆಫ್ ಕೋರ್ಸ್‌ಗಳ ಆಯೋಜನೆಗೆ ನಿಬಂಧ ವಿಧಿಸಲಾಗಿದೆ. ಅರ್ಜಿಯ ಮುಂದಿನ ವಿಚಾರಣೆಯನ್ನು ಆಗಸ್ಟ್ 12ಕ್ಕೆ ಮುಂದೂಡಲಾಗಿದೆ.ಇದಕ್ಕೂ ಮುನ್ನ ಅರ್ಜಿ ವಿಚಾರಣೆ ಸಂದರ್ಭದಲ್ಲಿ ವಾದ ಮಂಡಿಸಿದ ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ರೇಸ್ ಕೋರ್ಸ್‌ನಲ್ಲಿ ಕುದು-ರೆ ಪಂದ್ಯಗಳ ನಡೆಸುವ ವೇಳೆ ಬುಕ್ಕಿಗಳು ದೊಡ್ಡಮಟ್ಟದ ಅವ್ಯವಹಾರ ನಡೆಸಿದ್ದಾರೆ. ಈ ಸಂಬಂಧ ಸಿಸಿಬಿ ನಡೆಸಿದ ದಾಳಿಯಲ್ಲಿ ಹಣ, ಬೆಟ್ ಮಾಡುವವರಿಗೆ ಪೆನ್ಸಿಲ್‌ನಿಂದ ಬರೆದ ಟಿಕೆಟ್ ನೀಡುತ್ತಿದ್ದ ಕೋಟ್ಯಂತರ ರೂ.ಗಳ ಅವ್ಯವಹಾರ ಬೆಳಕಿಗೆ ಬಂದಿದೆ. ಇದರಿಂದ ಸರ್ಕಾರಕ್ಕೆ ಬರಬೇಕಾದ ತೆರಿಗೆ ವಂಚನೆ ಮಾಡಲಾಗಿದೆ ಎಂದರು.ಅಷ್ಟೇ ಮಾತ್ರವಲ್ಲದೆ, ಆಟೋ ಚಾಲಕರು ಸೇರಿದಂತೆ ಬಡ ಜನತೆ ತಾವು ದಿನಪೂರ್ತಿ ದುಡಿದ ಹಣವನ್ನು ಕುದುರೆ ಪಂದ್ಯಗಳಿಗೆ ವಿನಿಯೋಗಿಸುತ್ತಿದ್ದು, ಜೀವನ ನಡೆಸುವುದು ಕ?ಕರವಾಗುತ್ತಿದೆ. ಈ ನಿಟ್ಟಿನಲ್ಲಿ ಕುದುರೆ ಪಂದ್ಯಗಳಿಗೆ ಅನುಮತಿ ನೀಡಬಾರದು ಎಂದು ಕೋರಿದರು.ಬೆಂಗಳೂರು ಟರ್ಫ್ ಕ್ಲಬ್ ಲಿಮಿಟೆಡ್, ಕರ್ನಾಟಕ ಟ್ರೈನರ್ಸ್ ಅಸೋಸಿಯೇಷನ್ಸ್, ಕರ್ನಾಟಕ ರೇಸ್ ಕುದುರೆ ಮಾಲೀಕರ ಸಂಘ, ಕರ್ನಾಟಕ ಜಾಕಿಗಳ ಸಂಘದ ಪರ ವಕೀಲರು, ರೇಸ್ ಕೋರ್ಸ್‌ನಲ್ಲಿ ಬೆಟ್ಟಿಂಗ್ ಕಾನೂನುಬದ್ಧವಾಗಿದೆ. ಇದರಿಂದ ಸರ್ಕಾರಕ್ಕೆ ಕೋಟ್ಯಂತರ ರೂ. ತೆರಿಗೆ ಸಂಗ್ರಹವಾಗುತ್ತಿದೆ.

ಆದರೆ, ಬೆಟ್ಟಿಂಗ್‌ನಿಂದ ಬಡ ಜನತೆಗೆ ತೊಂದರೆಯಾಗಲಿದೆ ಎನ್ನುವುದಾದರೆ ಸರ್ಕಾರ ಬೆಟ್ಟಿಂಗ್ ನಡೆಸುವುದನ್ನು ಕಾನೂನುಬಾಹಿರ ಎಂಬುದಾಗಿ ಘೋ?ಣೆ ಮಾಡಲಿ ಎಂದರು. ಅಲ್ಲದೆ, ಕುದುರೆ ಪಂದ್ಯ ಒಂದು ಕ್ರೀಡೆಯಾಗಿದೆ. ಕ್ರೀಡೆಯಲ್ಲಿ ಭಾಗವಹಿಸಲು ದೇಶದ ವಿವಿಧ ಭಾಗಗಳಿಂದ ಜಾಕಿಗಳು ಈಗಾಗಲೇ ಬೆಂಗಳೂರಿಗೆ ಬಂದು ನೆಲೆಸಿದ್ದಾರೆ. ಏಕಸದಸ್ಯಪೀಠ ಪಂದ್ಯಗಳ ಆಯೋಜನೆಗೆ ಅವಕಾಶ ನೀಡಿದೆ. ಇದೀಗ ಸರ್ಕಾರ ಪಂದ್ಯಗಳ ಆಯೋಜನೆಗೆ ಅವಕಾಶ ನೀಡದಂತೆ ಕೋರಿದರೆ ಅದನ್ನೇ ನಂಬಿ ಜೀವನ ನಡೆಸುತ್ತಿರುವವರಿಗೆ ತೊಂದರೆಯಾಗಲಿದೆ ಎಂದು ತಿಳಿಸಿದರು.

ಕುಡಿಯುವ ನೀರು, ಬಿತ್ತನೆ ಬೀಜ ಹಾಗೂ ರಸಗೊಬ್ಬರದ ಕುರಿತು ನಡೆದ ಸಭೆಯಲ್ಲಿ ಅಧಿಕಾರಿಗಳಿಗೆ ಸೂಚನೆ

# ರೈತರ ಬೇಡಿಕೆಗೆ ಅನುಗುಣವಾಗಿ ಬೀತ್ತನೆ ಬೀಜ ವಿತರಿಸಿ; ಡಾ.ಶರಣ್ ಪ್ರಕಾಶ್ ಪಾಟೀಲ್



ರಾಯಚೂರು:-

ಜಿಲ್ಲೆಯಲ್ಲಿ 2024-25ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ರೈತರ ಬೇಡಿಕೆಗೆ ಅನುಗುಣವಾಗಿ ಬೀತ್ತನೆ ಬೀಜ ಹಾಗೂ ರಸಗೊಬ್ಬರ ವಿತರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಭಿವೃದ್ಧಿ ಹಾಗೂ ಜೀವನೋಪಾಯ ಹಾಗೂ ರಾಯಚೂರು ಜಿಲ್ಲಾ ಉಸುವಾರಿ ಸಚಿವರಾದ ಡಾ.ಶರಣ್ ಪ್ರಕಾಶ್ ಪಾಟೀಲ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಅವರು ಜೂ.21ರ ಶುಕ್ರವಾರ ದಂದು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕುಡಿಯುವ ನೀರು, ಅತಿವೃಷ್ಠಿ, ಬೀಜ ಮತ್ತು ರಸಗೊಬ್ಬರ ದಾಸ್ತಾನು ಬೇಡಿಕೆ ಪೂರೈಕೆ ಕುರಿತು ಹಮ್ಮಿಕೊಳ್ಳಲಾಗಿದ್ದ, ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು. ರೈತರಿಗೆ ಅವಶ್ಯವಿರುವ ಬಿತ್ತನೆ ಬೀಜ, ರಸಗೊಬ್ಬರಗಳನ್ನು ರೈತರ ಬೇಡಿಕೆಯನ್ವಯ ನಿಯಮಿತವಾಗಿ ಪೂರೈಸಬೇಕು. ಇದಕ್ಕಾಗಿ ಪ್ರತಿ ತಾಲ್ಲೂಕಿಗೆ ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಭೇಟಿ ನೀಡಿ ಪರಿಶೀಲಿಸಬೇಕು. ಕಳಪೆ ಬೀಜ ಮತ್ತು ರಸಗೊಬ್ಬರ ಪೂರೈಕೆ ಮಾಡಿದರೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾ ಉಸುವಾರಿ ಸಚಿವರು ಕೃಷಿ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಜಿಲ್ಲೆಯಲ್ಲಿ 2024-25ನೇ ಸಾಲಿನಲ್ಲಿ ಮುಂಗಾರು ಹಂಗಾಮಿನಲ್ಲಿ ವಿವಿಧ ರಸಗೊಬ್ಬರ ಬೇಡಿಕೆ ಹಿನ್ನಲೆಯಲ್ಲಿ ಯೂರಿಯಾ 35022 ಬೇಡಿಕೆಯಿದ್ದು, 49421.17 ದಾಸ್ತಾನು. ಡಿಎಪಿ 22344 ಬೇಡಿಕೆಯಿದ್ದು, 16510.90 ದಾಸ್ತಾನು. ಎಮ್‌ಒಪಿ 2050 ಬೇಡಿಕೆಯಿದ್ದು, 1488.85 ದಾಸ್ತಾನು. ಎನ್‌ಪಿಕೆ 51919 ಬೇಡಿಕೆಯಿದ್ದು, 46586.20 ದಾಸ್ತಾನು. ಎಸ್‌ಎಸ್‌ಪಿ 1765 ಬೇಡಿಕೆಯಿದ್ದು, 770.20 ದಾಸ್ತಾನು ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 113100 ಬೇಡಿಕೆಯಿದ್ದು, 114777.32ರಷ್ಟು ದಾಸ್ತನು ರಷ್ಟು ರಸಗೊಬ್ಬರ ದಾಸ್ತಾನು ಲಭ್ಯವಿದೆ ಎಂದು ಕೃಷಿ ಇಲಾಖೆಯ ಅಧಿಕಾರಿಗಳು ಸಚಿವರ ಗಮನಕ್ಕೆ ತಂದರು. ತುಂಗಭದ್ರ ಎಡದಂಡೆ ಹಾಗೂ ನಾರಾಯಣಪುರ ಬಲದಂಡೆ ಅಚ್ಚುಕಟ್ಟು ವ್ಯಾಪ್ತಿಯಲ್ಲಿ ರೈತರಿಗೆ ನೀರು ತಲುಪದೇ ಬೆಳೆಯಾನಿಗಿದೆ. ಪಹಣಿಯಲ್ಲಿ ನೀರಾವರಿ ಪ್ರದೇಶ ಎಂದು ನಮೂದಿಸಿರುವುದರಿಂದ ಪರಿಹಾರದಿಂದ ವಂಚನೆಗೊಂಡಿರುವ ಕುರಿತು ಶಾಸಕ ಶಿವರಾಜ್ ಪಾಟೀಲ್ ಅವರು ಜಿಲ್ಲಾ ಉಸು ಉಸ್ತುವಾರಿ ಸಚಿವರ ಗಮನಕ್ಕೆ ತಂದರು. ಕೂಡಲೇ ಬೆಳೆ ನಷ್ಟ ಪರಿಹಾರ ವಿತರಣೆಯಲ್ಲಿ ನೀರು ಬಾರದೆ ಇರುವ ಅಚ್ಚುಕಟ್ಟು ಪ್ರದೇಶದ ರೈತರ ಸಮಗ್ರ ಮಾಹಿತಿಯನ್ನು ಸಂಗ್ರಹಿಸಿ ವರದಿ ನೀಡುವಂತೆ ಜಿಲ್ಲಾ ಉಸುವಾರಿ ಸಚಿವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. 2024ನೇ ಸಾಲಿನ ಬಾರಿ ಮಳೆ ಅಥವಾ ಪ್ರವಾಹ, ಸಿಡಿಲು ಬಡಿತದಿಂದ ಜಿಲ್ಲೆಯ ಒಂದು ಪ್ರಕರಣೆ ದಾಖಲಾಗಿದ್ದು, 5ಲಕ್ಷ ರೂ.ಗಳ ಪರಿಹಾರ ನೀಡಲಾಗಿದೆ. ಜಾನುವಾರು ಜೀವ ಹಾನಿಯಲ್ಲಿ ಜಿಲ್ಲೆಯಲ್ಲಿ ಒಟ್ಟು 5 ಪ್ರಕರಣ ದಾಖಲಾಗಿವೆ. ಒಟ್ಟು 1,01,500ರೂ. ಗಳ ಪರಿಹಾರ ನೀಡಲಾಗಿದ್ದು, ಇನ್ನೂ ಜಿಲ್ಲೆಯಲ್ಲಿ ಯಾವುದಾದರು ಇದೇ ತರ ಪ್ರಕರಣಗಳು ಇದ್ದಲ್ಲಿ ಕೂಡಲೇ ಪರಿಹಾರ ಧನ ವಿತರಿಸಬೇಕು. ಪರಿಹಾರ ಧನ ವಿತರಣೆಯಲ್ಲಿ ವಿಳಂಬ ನೀತಿ ಯಾವುದೇ ಕಾರಣಕ್ಕೂ ಅನುಸರಿಸಬಾರದೆಂದು ಹೇಳಿದರು. ಜಿಲ್ಲೆಯಲ್ಲಿ ನೀರಿನ ಸಮಸ್ಯೆಯಿಂದ ಒಟ್ಟು 224 ಬೋರ್‌ವೆಲ್ ಬಾಡಿಗೆಗೆ ಪಡೆದ್ದು, ಸುಮಾರು 141 ಗ್ರಾಮಗಳಿಗೆ ಖಾಸಗಿ ಬೋರ್‌ವೆಲ್ ಮೂಲಕ ನೀರು ಸರಬರಾಜು ಮಾಡಲಾಗುತ್ತದೆ. ನಗರ ಪ್ರದೇಶದ ಒಟ್ಟು 1176 ಬೋರ್‌ವೆಲ್‌ಗಳಿದ್ದು, ಅದರ ಪೈಕಿ 1052 ಕಾರ್ಯನಿರ್ವಹಿಸುತಿವೆ. ಇನ್ನೂ 118 ಬೋರ್‌ವೆಲ್‌ಗೆಳು ನಿರುಪಯಕ್ತವಾಗಿದ್ದು, ಕೂಡಲೇ ದುರಸ್ಥಿ ಕಾರ್ಯಕ್ಕೈಗೊಂಡು ಯಾವುದೇ ಸಮಸ್ಯೆಯಾಗದಂತೆ ನೀರು ಸರಬರಾಜು ಮಾಡಲು ಕ್ರಮವಹಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಈ ವೇಳೆ ಮಾತನಾಡಿ, ಕಾಮಗಾರಿಯು ಅಚ್ಚುಟ್ಟಾಗಿದ್ದು, ಅಧಿಕಾರಿಗಳು ಮುತುವರ್ಜಿ ವಹಿಸಿ, ನಿರ್ವಹಣೆ ಮಾಡಬೇಕೆಂದು ಸ್ಥಳದಲ್ಲಿದ ಅಧಿಕಾರಿಗಳಿಗೆ ಸೂಚಿಸಿ, ದಿನ ಎಷ್ಟು ಗಂಟೆಗಳ ಕಾಲ ನೀರು ಕೆರೆಗೆ ಸರಬರಾಜು ಕಾರ್ಯ ಮಾಡಲಾಗುತ್ತದೆ ಎಂದು ಅಧಿಕಾರಿಗಳಿಂದ ಮಾಹಿತಿ ಪಡೆದರು. ಇದೇ ಸಂದರ್ಭದಲ್ಲಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯಗ ಮಂಡಳಿಯ ಅಧ್ಯಕ್ಷರು ಹಾಗೂ ಸಿಂಧನೂರು ಕ್ಷೇತ್ರದ ಶಾಸಕ ಪಂಪನಗೌಡ ಬಾದರ್ಲಿ, ಸಂಸದ ಜಿ.ಕುಮಾರ ನಾಯಕ, ಮಾನವಿ ಶಾಸಕ ಜಿ.ಹಂಪಯ್ಯ ನಾಯಕ, ವಿಧಾನ ಪರಿಷತ್ ಸದಸ್ಯ ಎ.ವಸಂತ ಕುಮಾರ್, ಎಪಿಎಮ್‌ಸಿ ಅಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ್, ನಗಾರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ರಾಜಶೇಖರ ರಾಮಸ್ವಾಮಿ, ಪ್ರಭಾರಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕರಾಮ್ ಪಾಂಡ್ವೆ, ಜಿಲ್ಲಾ ಪೊಲೀಸ್ ವರಿಷ್ಠ ಅಧಿಕಾರಿ ನಿಖಿಲ್ ಬಿ. ಅಪರ ಜಿಲ್ಲಾಧಿಕಾರಿ ಡಾ.ಕೆ.ಆರ್. ದುರುಗೇಶ್, ಸಹಾಯಕ ಆಯುಕ್ತರಾದ ಅವಿನಾಶ್ ಶಿಂಧೆ, ಮೈಬೂಬಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶಿವಪೂರೆ ಜಿಲ್ಲಾ ಪಂಚಾಯತಿ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಸು-ರೇಂದ್ರ ಬಾಬು, ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ದೇವಿಕಾ ಆರ್. ಜಿಲ್ಲೆಯ ಎಲ್ಲಾ ತಹಶೀಲ್ದಾರ್ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಇದ್ದರು.


### ಸಚಿವರಿಂದ ಜಾಕ್ವಲ್‌ಗೆ ಭೇಟಿ, ಪರಿಶೀಲನೆ:

ಜಿಲ್ಲೆಯ ದೇವದುರ್ಗ ತಾಲೂಕಿನ ಕೃಷ್ಣ ನದಿ ಅಪ್ರಹಾಳ ಗ್ರಾಮದಲ್ಲಿ ನಿರ್ಮಾಣ ಮಾಡಲಾದ ಗಣೆಕಲ್ ಸಮತೋಲನ ಜಲಾಶಯಕ್ಕೆ ನೀರು ಪೂರೈಸುವ ಯೋಜನೆ ಜಾಕ್ವಲ್ ಕಮ್ ಪಂಪ ಹೌಸ್‌ಗೆ ವೈದ್ಯಕೀಯ ಶಿಕ್ಷಣ, ಕೌಶಲ್ಯಭಿವೃದ್ಧಿ ಹಾಗೂ ಜೀವನೋಪಾಯ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣ್ ಪ್ರಕಾಶ್ ಪಾಟೀಲ್ ಅವರು ಭೇಟಿ ನೀಡಿ ಪರಿಶೀಲನೆ ಮಾಡಿ, ಸ್ಥಳದಲ್ಲಿದ್ದ ಅಧಿಕಾರಿಗಳಿಂದ ಜಾಕ್ವಲ್ ಕಮ್ ಪಂಪ ಹೌಸ್ ಕುರಿತು ಮಾಹಿತಿ ಪಡೆದರು.

ಮುಂಗಾರು ಸಾಂಸ್ಕೃತಿಕ ರಾಯಚೂರು ಹಬ್ಬ ಸರಕಾರದಿಂದ ಆಯೋಜನೆಗೆ ಶಿವರಾಜ ಪಾಟೀಲ್ ಆಗ್ರಹ

# ಮುಂಗಾರುಸಾಂಸ್ಕೃತಿಕ ಹಬ್ಬ ರಾಜ್ಯಕ್ಕೆ ಮಾದರಿ: ಡಾ.ಶರಣಪ್ರಕಾಶ್ ಪಾಟೀಲ್






ರಾಯಚೂರು:-

ಕಳೆದ 24 ವರ್ಷಗಳಿಂದ ಮುನ್ನೂರು ಕಾವು ಸಮಾಜದಿಂದ ಆಯೋಜನೆ ಮಾಡುವ ಮುಂಗಾರು ಸಾಂಸ್ಕೃತಿಕ ರಾಯಚೂರು ನಾಡ ಹಬ್ಬವನ್ನು ಅತ್ಯಂತ ಅದ್ದೂರಿಯಾಗಿ ಆಚರಣೆ ಮಾಡುವುದರ ಮೂಲಕ ರಾಜ್ಯದಲ್ಲಿ ಗಮನ ಸೆಳೆದ ಮುನ್ನೂರು ಕಾವು ಸಮಾಜದ ಸಾಂಸ್ಕೃತಿಕ ಕಾರ್ಯಕ್ರಮ ಮಾದರಿಯಾಗಿದೆ ಎಂದು ರಾಜ್ಯ ವೈದ್ಯಕೀಯ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣ ಪ್ರಕಾಶ್ ಪಾಟೀಲ್ ಹೇಳಿದರು. ಅವರು ನಗರದ ರಾಜೇಂದ್ರ ಗಂಜ್ ಅವರಣದಲ್ಲಿ ಮೊದಲ ದಿನದ ಒಂದುವರೆ ಟನ್ ಭಾರದ ಎತ್ತುಗಳ ಕಲ್ಲು ಎಳೆಯುವ ಸ್ಪರ್ಧೆಗೆ ಚಾಲನೆ ನೀಡಿ ಮಾತನಾಡಿ,ಮುನ್ನೂರು ಕಾವು ಸಮಾಜದ ಹಿರಿಯ ಮುಖಂಡ ಹಬ್ಬದರೂವಾರಿ ಮಾಜಿ ಶಾಸಕ ಎ. ಪಾಪಾರೆಡ್ಡಿ ಮತ್ತು ಬೆಲ್ಲಂ ನರಸರೆಡ್ಡಿ ಅವರ ನೇತೃತ್ವದಲ್ಲಿ ನಡೆಯುವ ಮುಂಗಾರು ಹಬ್ಬ ರಾಜ್ಯದಲ್ಲಿ ಮಾದರಿಯಾಗಿದೆ. ಭಾರತ ಕೃಷಿ ಪ್ರಧಾನವನ್ನು ಅವಲಂಬಿತಗೊಂಡ ದೇಶ. ಕೃಷಿ ಪ್ರಧಾನವಾಗಿ ಆಚರಣೆ ಮಾಡುವ ಮುಂಗಾರು ಸಾಂಸ್ಕೃತಿಕ ರಾಯಚೂರು ನಾಡ ಹಬ್ಬ ಭಾರೀ ಜನಪ್ರಿಯತೆ ಪಡೆದುಕೊಂಡಿದೆ. ಮುಂಗಾರು ಬಂದಂತ ಸಂದರ್ಭದಲ್ಲಿ ರೈತರಿಗೆ ಸಂತೋಷ ಉಂಟು ಮಾಡುವ ಸಮಾಜ ಯಾವುದಾದರೂ ಇದ್ದರೆ ಅದು ಮುನ್ನೂರು ಕಾಪು ಸಮಾಜ ಮಾತ್ರ ರೈತ ಸಮುದಾಯಕ್ಕೆ ಉತ್ತಮವಾದ ಸಂತೋಷಕರ ಬದುಕನ್ನು ಕೊಡುವ ಕೆಲಸ ಸಮಾಜ ಮಾಡುತ್ತಿದೆ ಸರಕಾರ ಪರವಾಗಿ ಅಭಿನಂದನೆ ಹಾಗೂ ಧನ್ಯವಾದಗಳು ತಿಳಿಸಿದರು. ಪ್ರತಿ ವರ್ಷ ರೈತರು ಕೃಷಿ ಚಟುವಟಿಕೆ ಆರಂಭಿಸಲು ಅವರಿಗೆ ಉತ್ಸವವನ್ನು ತುಂಬುವ ನಿಟ್ಟಿನಲ್ಲಿ ಮತ್ತು ನಶಸಿ ಹೋಗುತ್ತಿರುವ ಜಾನಪದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಉಳಿಸುವ ಬೆಳೆಸುವ ನಿಟ್ಟಿನಲ್ಲಿ ಈ ಭಾಗದಲ್ಲಿ ಪ್ರಮುಖ ಪಾತ್ರ ನಿರ್ವಹಿಸಿ ರಾಜ್ಯದಲ್ಲಿ ಪ್ರತಿಷ್ಠಿತ ಪಡೆದುಕೊಂಡಿ-ದೆ. ಮುಂಗಾರು ಹಬ್ಬವನ್ನು ಪಾಪಾರೆಡ್ಡಿ ಅವರು ಅತ್ಯಂತ ಅದ್ದೂರಿ ಆಯೋಜನೆ ಮಾಡುವುದರ ಮೂಲಕ ರಾಜ್ಯವೇ ಗುರುತಿಸುವಂತೆ ಅತ್ಯಂತ ವೈಭವಕರಣದಿಂದ ಆಚರಣೆ ಮಾಡುತ್ತಿದ್ದಾರೆ ಎಂದರು. ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ ಮಾತನಾಡಿ,ಮುಂಗಾರು ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ರಾಜ್ಯ ಮಾದರಿಯಾಗಿದ್ದು ಸರ್ಕಾರ ಎಪಿಎಂಸಿ ಮೂಲಕವೇ ಆಚರಿಸಲು ಮುಂದಾಗಬೇಕು. ಸಮಾಜದ ಮುಂದವರೆಯಲು ಎ.ಪಾಪಾರೆಡ್ಡಿಯವ ನಿರಂತರ ಶ್ರಮವಹಿಸುತ್ತಿರುವದು ಶ್ಲಾಘನೀಯ ಕಾರ್ಯವೆಂದರು. ವಿದಾನ ಪರಿಷತ್ ಸದಸ್ಯ ಎ.ವಸಂತಕುಮಾರ ಮಾತನಾಡಿ ರೈತರ ಆರ್ಥಿಕ ಪರಸ್ಥಿತಿ ಬದಲಾವಣೆಯಿಂದ ಸುಸ್ಥಿತ ಸಮಾಜ ನಿರ್ಮಾಣ ಅವಲಂಬಿತವಾಗಿದೆ. ರೈತರ ಹಬ್ಬವನ್ನು ಮುಂಗಾರು ಸಾಂಸ್ಕೃತಿಕ ಹಬ್ಬವಾಗಿ ಆಚರಿಸುತ್ತಿರುವದು ಪ್ರಶಂಸನೀಯವೆಂದರು. ಮಾಜಿ ಸಚಿವ ಅಮರಗೌಡ ಬಯ್ಯಾಪುರುಸೇರಿ ಅನೇಕರು ಮಾತನಾಡಿದರು. ಹಬ್ಬದ ರೂವಾರಿ ಮಾಜಿ ಶಾಸಕ ಎ. ಪಾಪಾರೆಡ್ಡಿ ಅವರು ಮುನ್ನೂರು ಕಾಪು ಸಮಾಜವನ್ನು ಬಲಿಷ್ಠಗೊಳಿಸಿದರ ಜೊತೆಗೆ ಮುಂಗಾರು ಸಾಂಸ್ಕೃತಿಕ ರಾಯಚೂರು ಹಬ್ಬವನ್ನು ರಾಜ್ಯವೇ ಗುರುತಿಸುವಂತೆ ಮಾಡಿದ ಕೀರ್ತಿ ಅವರಿಗೆ ಸಲ್ಲುತ್ತದೆ. ರೈತರ ಕೃಷಿ ಪ್ರಧಾನವಾಗಿ ಕಳೆದ 24 ವರ್ಷಗಳಿಂದ ಅತ್ಯಂತ ಅದ್ದೂರಿ ಆಚರಣೆ ಮಾಡುತ್ತಿರುವ ಮುಂಗಾರು ಹಬ್ಬ ಭಾರೀ ಜನಪ್ರಿಯತೆ ಪಡೆದುಕೊಂಡಿದೆ. ಇದಕ್ಕೆ ಉತ್ತಮ ನಿರ್ದೇಶನ ಎ. ಪಾಪಾರೆಡ್ಡಿ ಅವರು. ಆ ನಿಟ್ಟಿನಲ್ಲಿ ಮುಂದಿನ ವರ್ಷ ಮುಂಗಾರು ಹಬ್ಬ 25 ವರ್ಷಕ್ಕೆ ಪಾದರ್ಪಣೆ ಮಾಡುತ್ತಿರುವ ಹಿನ್ನಲೆ ಹಬ್ಬದ ರೂವಾರಿ ಎ. ಪಾಪಾರೆಡ್ಡಿ ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡುವಂತೆ ಸರಕಾರಕ್ಕೆ ಮನವಿ ಮಾಡಿದರು.

ಶಾಸಕ ಎ.ಪಾಪಾರೆಡ್ಡಿ ಮಾತನಾಡಿ 2006 ರಂದು ಜಿಲ್ಲೆ ಉತ್ಸವ ನಡೆದಿಲ್ಲ. ಜನರನ್ನು ಸಾಂಸ್ಕೃತಿಕವಾಗಿ ತೊಡಗಿಸಿಕೊಳ್ಳಲು ಜಿಲ್ಲೆ ಎಲ್ಲಾ ಶಾಸಕರು ಜಿಲ್ಲಾ ಉತ್ಸವ ಆಚರಣೆಗೆಮುಂದಾಗಬೇಕೆಂದರು.

ಶಾಸಕ ಶಿವರಾಜ ಪಾಟೀಲ್ ಮಾತನಾಡಿ, ಮುನ್ನೂರು ಕಾಪು ಯಾರ ನೆರವು ಪಡೆಯದೆ ಕಳೆದ 24 ವರ್ಷದಿಂದ ಎ.ಪಾಪಾರೆಡ್ಡಿ ನೇತೃತ್ವದಲ್ಲಿ ಅತ್ಯಂತ ಅದ್ದೂರಿಯಾಗಿ ಈ ಹಬ್ಬವನ್ನು ಆಚರಣೆ ಮಾಡಲಾಗುತ್ತಿದೆ. ಈ ರೀತಿ ಹಬ್ಬಗಳನ್ನು ಬೇರೆ ಯಾವ ಜಿಲ್ಲೆಗಳಲ್ಲಿ ಕೂಡ ಜರುಗುವುದಿಲ್ಲ. ಸರ್ಕಾರದಿಂದ ಒಂದು ರೂ.ಕೂಡ ಪಡೆಯದೆ ಕೇವಲ ಸಮಾಜದ ವತಿಯಿಂದ ಇಷ್ಟೊಂದು ಅದ್ದೂರಿಯಾಗಿ ಮಾಡುತ್ತಿರುವುದು ಸಾಮಾನ್ಯದ ವಿಷಯವಲ್ಲ ಎಂದರು.

ಗ್ರಾಮೀಣ ಶಾಸಕ ಬಸನಗೌಡ ದದ್ದಲ್ ಮಾತನಾಡಿ, ಕಳೆದ 24 ವರ್ಷಗಳಿಂದ ಮುನ್ನೂರು ಕಾಪು ಸಮಾಜ ಅತ್ಯಂತ ಅದ್ದೂರಿ ಆಚರಣೆ ಮಾಡುತ್ತಿರುವ ಮುಂಗಾರು ಹಬ್ಬ ರಾಜ್ಯದಲ್ಲಿ ಗುರುತಿಸಿಕೊಂಡಿದೆ.

ಮುಂಗಾರು ಹಬ್ಬವನ್ನು ರೈತರ ಹಬ್ಬವನ್ನಾಗಿ ಆಚರಣೆ ಮಾಡುತ್ತಿರುವ ಮುಂಗಾರು ಸಾಂಸ್ಕೃತಿಕ ಹಬ್ಬವನ್ನು ಸರಕಾರದಿಂದ ಆಯೋಜನೆ ಮಾಡುವಂತೆ ಜಿಲ್ಲಾ ಉಸ್ತುವಾರಿ ಸಚಿವರಿಗೆ ದದ್ದಲ್ ಅವರು ಒತ್ತಾಯ ಮಾಡಿದರು.

ಈ ಸಂದರ್ಭದಲ್ಲಿ ಬಿಚ್ಚಲಿ ವೀರತಪಸ್ವಿ ವೀರಭದ್ರ ಶಿವಾಚಾರ್ಯ ಮಹಾಸ್ವಾಮಿಗಳು ಸೋಮವಾರಪೇಟೆ ಹಿರೇಮಠ ಅಭಿನವ ರಾಚೋಟಿ ವೀರ ಶಿವಾಚಾರ್ಯ ಮಹಾಸ್ವಾಮಿಗಳು, ಶಂಭು ಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳು,ಸುಲ್ತಾನಪುರ ಬೃಹನ್ಮಠ, ಪಂಪಾಪತಿ ದೆವರು. ಕಡಗಂಚಿ ಪಾಲ್ಗೊಂಡ ವೀಕ್ಷಕರಿಗೆ ಮಾಜಿ ಶಾಸಕರು ಹಾಗೂ ಹಬ್ಬದ ರೂವಾರಿ ಎ.ಪಾಪಾರೆಡ್ಡಿ, ಮುನ್ನೂರುಕಾಪು ಸಮಾಜದ ಅಧ್ಯಕ್ಷ ಬೆಲ್ಲಂ ನರಸರೆಡ್ಡಿ, ಕಾರ್ಯದರ್ಶಿ ಅಧ್ಯಕ್ಷರು ವಿ ಕೃಷ್ಣಮೂರ್ತಿ ವೆಂಕಟರೆಡ್ಡಿ, ಎನ್.ಶಂಕರಪ್ಪ, ಕಾಂಗ್ರೆಸ್ ಶಾಂತಪ್ಪ, ಉಪ್ಪಾರ ಸಮಾಜ ಮುಖಂಡ ಗಾದರ ಬೆಟ್ಟಪ್ಪ, ಕಡಗೋಳ್ ಆಂಜನೇಯ, ಮುನ್ನೂರು,ಜಯವಂತರಾವ ಪತಂಗೆ, ಜಿ.ಶಿವಮೂರ್ತಿ, ಕಾಪು ಸಮಾಜದ ಮುಖಂಡರು ಸೇರಿದಂತೆ ಅನೇಕರು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.



# ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಸಂಸ್ಕಾರವನ್ನು ಕಲಿಸಿ : ಶಾಸಕ ಲಕ್ಷ್ಮಣ ಸವದಿ

ಅಥಣಿ:–

ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಸಂಸ್ಕಾರವನ್ನು ನೀಡಿ ಉತ್ತಮ ಪ್ರಜೆಗಳನ್ನು ರೂಪಿಸಬೇಕು. ಸರಕಾರಿ ಶಾಲೆಯಲ್ಲಿ ಶಿಕ್ಷಣ ಪಡೆದ ಗ್ರಾಮೀಣ ಭಾಗದ ಬಹುಪಾಲು ಮಕ್ಕಳು ದೇಶದ ಅನೇಕ ಉನ್ನತ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು. ಅವರು ದೇಶಪಾಂಡೆ ನಗರದಲ್ಲಿ ನೂತನ ಅಂಗನವಾಡಿ ಕಟ್ಟಡದ ಶಂಕುಸ್ಥಾಪನೆ ಹಾಗೂ ಭಡಕಂಬಿ ತೋಟದ ಕನ್ನಡ ಪ್ರಾಥಮಿಕ ಶಾಲೆಯ 2 ಹೆಚ್ಚುವರಿ ಶಾಲಾ ಕೊಠಡಿಗಳ ಉದ್ಘಾಟನೆ ನೆರವೇರಿಸಿ ಮಾತನಾಡುತ್ತಿದ್ದರು.



ಸರಕಾರಿ ಶಾಲೆಯಲ್ಲಿ ಕಲಿತ ಮಕ್ಕಳು ಉನ್ನತ ಸ್ಥಾನಕ್ಕೆ ಏರಬೇಕಾದಲ್ಲಿ ಶಿಕ್ಷಕರು ಮಕ್ಕಳಿಗೆ ಕೊಡುವ ಶಿಕ್ಷಣ ಮತ್ತು ಸಂಸ್ಕಾರ ಬಹಳ ಮಹತ್ವದ ಪಾತ್ರ ವಹಿಸುತ್ತದೆ ಎಂದ ಅವರು ಭಡಂಕಬಿ ತೋಟದ ಸರಕಾರಿ ಶಾಲೆಯ ಶಿಕ್ಷಕರು ಉತ್ತಮ ಕಾರ್ಯನಿರ್ವಹಿಸುತ್ತಿರುವ ಪರಿಣಾಮ ಖಾಸಗಿ ಶಾಲೆಗಳಿಂದ ಮಕ್ಕಳು ಕೂಡ ಇಲ್ಲಿ ಪ್ರವೇಶ ಪಡೆಯುತ್ತಿರುವುದು ಅಭಿನಂದನಾರ್ಹ ಸಂಗತಿ ಎಂದರು.

ನಮ್ಮಲ್ಲಿ ಅಂಕಗಳ ಆಧಾರಿತ ಶಿಕ್ಷಣ ಪದ್ಧತಿ ಬಂದಿರುವ ಪರಿಣಾಮ ಶಿಕ್ಷಣ ಪದ್ಧತಿ ದಾರಿ ತಪ್ಪುತ್ತಿದೆ ಹೆಚ್ಚು ಹೆಚ್ಚು ಅಂಕ ಗಳಿಸಿ ಉನ್ನತ ಶಿಕ್ಷಣ ಪೂರ್ಣಗೊಳಿಸಿದ ನಂತರ ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ವಿದೇಶಗಳಿಗೆ ತೆರಳಿ ಅಲ್ಲಿಯೇ ಉದ್ಯೋಗ ಪಡೆದು–ಕೊಂಡು ಜೊತೆಗೆ ಗ್ರೀನ್ ಕಾರ್ಡ ಪಡೆದು ಅಲ್ಲಿಯೇ ಖಾಯಂ ಉಳಿದುಕೊಳ್ಳುತ್ತಾರೆ ಆದರೆ ಅವರನ್ನೇ ನಂಬಿರುವ ಪಾಲಕರು ಅನಿವಾರ್ಯವಾಗಿ ವೃದ್ಧಾಶ್ರಮದಲ್ಲಿ ಆಶ್ರಯ ಪಡೆಯುತ್ತಿರುವುದು ದುರ್ದೈವದ ಸಂಗತಿ ಎಂದರು.

ತಂದೆ, ತಾಯಿ ಮತ್ತು ಶಿಕ್ಷಕರು ಮಕ್ಕಳ ಸವಾರ್ಂಗೀಣ ಅಭಿವೃದ್ದಿಯಲ್ಲಿ ಮಹತ್ವದ ವಹಿಸುತ್ತಾರೆ. ಮಕ್ಕಳಿಗೆ ಸಂಸ್ಕಾರ ಭರಿತ ಶಿಕ್ಷಣ ಕೊಡಬೇಕು ಆಗ ಮಾತ್ರ ಶಿಕ್ಷಣದ ವ್ಯವಸ್ಥೆ ಬದಲಾಗುತ್ತದೆ ಎಂದ ಅವರು ಈ ನಿಟ್ಟಿನಲ್ಲಿ ಒಳ್ಳೆಯ ಸಂಸ್ಕಾರ ನೀಡುವ ಸರಕಾರಿ ಶಾಲೆಗಳಿಗೆ ಮಕ್ಕಳನ್ನು ಸೇರ್ಪಡೆಗೊಳಿಸಿ ಎಂದು ಕರೆ ನೀಡಿದರು.

ಈ ವೇಳೆ ಮುಖಂಡರಾದ ಶಿವಾನಂದ ದಿವಾನಮಳ ಮಾತನಾಡಿ ಮೊಬೈಲ್ ಮತ್ತು ವಿಡಿಯೋ ಗೇಮಗಳ ಪರಿಣಾಮ ಮಕ್ಕಳು ವಿನಯ ಮತ್ತು ಸೃಜನಶೀಲತೆ ಕಳೆದುಕೊಳ್ಳುತ್ತಿದ್ದು, ಪಾಲಕರು ಮಕ್ಕಳಿಗೆ ಅಗತ್ಯವಿದ್ದಷ್ಟು ಮಾತ್ರ ಮೊಬೈಲ್ ಕೊಡಬೇಕು ಎಂದ ಅವರು ಶಿಕ್ಷಣದ ಜೊತೆಗೆ ಮಕ್ಕಳಿಗೆ ವಚನಗಳನ್ನು, ಪ್ರಾರ್ಥನೆಯಂತಹ ನೈತಿಕ ಶಿಕ್ಷಣ ಕೊಡಬೇಕು ಆಗ ಮಾತ್ರ ಸಮಾಜದ ಆಸ್ತಿಯಾಗಲು ಸಾಧ್ಯ ಎಂದರು.

ಶಾಸಕ ಲಕ್ಷ್ಮಣ ಸವದಿಯವರ ಸತತ ಪ್ರಯತ್ನದ ಫಲವಾಗಿ ಅಥಣಿಯಲ್ಲಿ ಪಶು ವೈದ್ಯಕೀಯ ಮಹಾವಿದ್ಯಾಲಯ, ತಾಂತ್ರಿಕ ಮಹಾವಿದ್ಯಾಲಯ, ಕೇಂದ್ರಿಯ ವಿದ್ಯಾಲಯಗಳನ್ನು ಪ್ರಾರಂಭಗೊಂಡಿವೆ ಎಂದ ಅವರು ಶಾಸಕ ಲಕ್ಷ್ಮಣ ಸವದಿ ಇಂತಹ ಇನ್ನೂ ಅನೇಕ ಜನಪರ ಯೋಜನೆಗಳನ್ನು ಅನುಷ್ಠಾನಗೊಳಿಸಲಿ ಎಂದು ಶುಭ ಹಾರೈಸಿದರು.

ಕೊಠಡಿಗಳನ್ನು ನಿರ್ಮಿಸಿದ ಗುತ್ತಿಗೆದಾರ ರಾಜು ಮರಡಿ ಮತ್ತು ಇನ್ನಿತರ ವಸ್ತುಗಳನ್ನು ದಾನ ನೀಡಿದ ಮಹನೀಯರನ್ನು ಹಾಗೂ ಅಡುಗೆ ಸಿಬ್ಬಂದಿಗಳನ್ನು ಸತ್ಕರಿಸಲಾಯಿತು. ಮುಖ್ಯಾಧ್ಯಾಪಕ ಎ.ಎಸ್.ಪೂಜಾರಿ ಪ್ರಾಸ್ತಾವಿಕವಾಗಿ ಮಾತನಾಡಿದರು, ಎ.ಆರ್.ಸವದಿ ನಿರೂಪಿಸಿದರು.

ಈ ಸಂದರ್ಭದಲ್ಲಿ ಜಿ.ಪಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ವೀರಣ್ಣಾ ವಾಲಿ. ಪುರಸಭಾ ಸದಸ್ಯರಾದ ರಾಜಶೇಖರ ಗುಡೋಡಗಿ ಸಂತೋಷ ಸಾವಡಕರ. ಮಲ್ಲೇಶ ಹುದ್ದಾರ, ದತ್ತಾ ವಾಸ್ಟರ್, ಮುಖಂಡರಾದ ಶಿವರುದ್ರ ಘೂಳಪ್ಪನವರ, ಅರುಣ ಭಾಸಿಂಗಿ. ರವಿ ಭಡಕಂಬಿ. ಮಲ್ಲಿಕಾರ್ಜುನ ಕುಲ್ಲೋಳಿ. ನರಸು ಭಡಕಂಬಿ, ಮಂಜು ಭಜಂತ್ರಿ. ಬಸವರಾಜ ಹಳ್ಳದಮಳ, ತಿಪ್ಪಣ್ಣ ಭಜಂತ್ರಿ, ಸುಭಾಸ್ ಕಾಗಲಿ, ಶಿವು ಚಮಕೇರಿ, ರಮೇಶ ಕಾಗಲಿ, ಗುತ್ತಿಗೆದಾರ ಪಿ.ಬಿ.ಪಾಟೀಲ ಸೇರಿದಂತೆ ಶಾಲೆಯ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಮಹಿಳಾ ಮತ್ತು ಮಕ್ಕಳ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ಕುಡಿವ ನೀರಿನ ಸಮಸ್ಯೆ ಬಗೆಹರಿಸಲು ಆಗ್ರಹಿಸಿ ಮನವಿ

ಕಲಬುರಗಿ:–

ನಗರದಲ್ಲಿ 15 ದಿನಗಳಿಗೊಮ್ಮೆ ಕುಡಿಯುವ ನೀರು ಸರಬರಾಜು ಆಗುತ್ತಿದ್ದು, ಆ ನೀರು ಕುಡಿದರೆ ಆರೋಗ್ಯ ತಪ್ಪಿ ರೋಗರುಜಿನಗಳು ಬರುತ್ತಿದು, ಕೂಡಲೇ ಈ ಸಮಸ್ಯೆಯನ್ನು ಬಗೆ ಹರಿಸಬೇಕೆಂದು ಜೈ ಕನ್ನಡಿಗರ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಸಚೀನ್ ಫರಹತಾಬಾದ ಅವರ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಕಲಬುರಗಿ ನಗರದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಸರಿಯಾಗಿ ಇಲ್ಲದೇ ಇರುವುದರಿಂದ ತುಂಬಾ ತೊಂದರೆಯಗಳು ಆಗುತ್ತಿದ್ದು, ಸದರಿ ಕಲಬುರಗಿ ನಗರದ ಜೇಮ್ಸ್ ಆಸ್ಪತ್ರೆ ಹಾಗೂ ಇತರೇ ಆಸ್ಪತ್ರೆಗಳಲ್ಲಿ ನೀರು ಇಲ್ಲದೇ ರೋಗಿಗಳು, ಸಾರ್ವಜನಿಕರು ತುಂಬಾ ತೊಂದರೆಗಳನ್ನು ಅನುಭವಿಸುತ್ತಿದ್ದಾರೆ ಎಂದು ದಿನಪತ್ರಿಕೆಯಲ್ಲಿ ತಿಳಿದು ಬಂದಿರುತ್ತದೆ. ಹಾಗೂ ಪ್ರತಿಯೊಂದು ಕಲಬುರಗಿ ನಗರದ ಏರಿಯಾಗಳಲ್ಲಿ ಕುಡಿಯುವ ನೀರಿನ ಹಾಹಾಕಾರ ಎದ್ದಿರುತ್ತದೆ ಇದರಿಂದ ಅನೇಕ ರೀತಿಯ ಅವಘಡಗಳು ಸಂಭವಿಸುತ್ತಿವೆ. ಒಂದು ವೇಳೆ ಕುಡಿಯುವ ನೀರು ಬಂದರೆ ಸಂಪೂರ್ಣವಾಗಿ ಆ ನೀರು ಮಲೀನಗೊಂಡಂತಹ ಬಣಕ್ಕೆ ತಿರುಗುತ್ತಿದ್ದು. ಇದ–ರಿಂದ ಸಾರ್ವಜನಿಕರಿಗೆ ಆರೋಗ್ಯ ಸಮಸ್ಯೆ ಉದ್ಭವಿಸುವ ಲಕ್ಷಣಗಳು ಗೋಚರಿಸುತ್ತಿವೆ. ಆದ್ದರಿಂದ ನಮ್ಮ ವೇದಿಕೆ ವತಿಯಿಂದ ತಮ್ಮಲ್ಲಿ ಕುಡಿಯುವ ನೀರನ ವ್ಯವಸ್ಥೆಯನ್ನು ಸ್ವಚ್ಛವಾಗಿ ನೀರು ಸರಬರಾಜು ಮಾಡುವಂತೆ ಅಧಿಕಾರಿಗಳಿಗೆ ಆದೇಶಿಸಬೇಕೆಂದು ಈ ಮೂಲಕ ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ವಿನಂತಿಸಿಕೊಳ್ಳುತ್ತೇವೆ. ಒಂದು ವೇಳೆ ತಾವುಗಳು ಕ್ರಮ ಕೈಗೊಳ್ಳಲು ವಿಳಂಬ ಮಾಡಿದರೆ, ಸದರಿ ಕಲಬುರಗಿ ನಗರದ ಸಂಪೂರ್ಣ ಸಮಸ್ತ ನಾಗರೀಕರು ತಮ್ಮ ಕಛೇರಿಯ ಮುಂದೆ ಖಾಲಿ ಕೊಡಗಳನಿಟ್ಟು ಉಗ್ರವಾದ ಪ್ರತಿಭಟನೆ ಮಾಡುವುದು ಅನಿವಾರ್ಯವಾಗುತ್ತದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

# ಪೆಟ್ರೋಲ್,ಡೀಸೆಲ್ ದರ ಏರಿಕೆ ಖಂಡಿಸಿ ಪ್ರತಿಭಟನೆ

ಚನ್ನಮ್ಮನ ಕಿತ್ತೂರು:–

ಪೆಟ್ರೋಲ್,ಡೀಸೆಲ್ ದರ ಏರಿಕೆ ಖಂಡಿಸಿ ರಾಷ್ಟ್ರೀಯ ಹೆದ್ದಾರಿ 4ರ ಪಕ್ಕ ಚನ್ನಮ್ಮನ ವೃತ್ತದಲ್ಲಿ ಬಿಜೆಪಿ ಮಂಡಳದ ನೇತೃತ್ವದಲ್ಲಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಕೈಯಲ್ಲಿ ಬೆಲೆ ಏರಿಕೆಯ ಬಿತ್ತಿ ಪತ್ರ ಹಿಡಿದು ಆಕ್ರೋಶ ವ್ಯಕ್ತಪಡಿಸಿದ ಪ್ರತಿಭಟನಾಕಾರರು ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ನೇತೃತ್ವ ವಹಿಸಿಕೊಂಡು ಮಾತನಾಡಿದ ಮಾಜಿ ಶಾಸಕ ಮಹಾಂತೇಶ ದೊಡ್ಡಗೌಡರ, ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ರಾಜ್ಯ ಸರ್ಕಾರ ದರ ಹೆಚ್ಚಿಸಿದೆ. ಅದರಲ್ಲೂ ಪೆಟ್ರೋಲ್, ಡೀಸೆಲ್ ದರ ಹೆಚ್ಚಳ ಎಲ್ಲದರ ಮೇಲೆ ಪರಿಣಾಮ ಬೀರಿದೆ ಇದು ಸರಿಯಾದ ಕ್ರಮವಲ್ಲ. ಸರ್ಕಾರ ಇದೇ ರೀತಿ ಮುಂದುವರೆದರೆ ಜನ ದಂಗೆ ಏಳುವ ಪರಿಸ್ಥಿತಿ ಬರುತ್ತದೆ ಇದಾಗುವ ಪೂರ್ವದಲ್ಲಿ ಸರ್ಕಾರ ಎಚ್ಚೆತ್ತುಕೊಳ್ಳಬೇಕೆಂದರು. ಮುಖಂಡೆ ಲಕ್ಷ್ಮೀ ಇನಾಮದಾರ ಮಾತನಾಡಿ ತೈಲ ದರ ಏರಿಕೆಯಿಂದ ವಾಹನ ಸವಾರರಿಗೆ ಮಾತ್ರವಲ್ಲ ಸರಕು ಸಾಗಾಣಿಕೆ ಮೇಲೂ ಪರಿಣಾಮ ಬೀರುವುದರ ಜೊತೆ–ಗೆ ಪ್ರಯಾಣದ ದರವು ಹೆಚ್ಚಲಿದೆ. ತರಕಾರಿ ದಿನನಿತ್ಯದ ಗೃಹಬಳಕೆ ವಸ್ತುಗಳು, ದವಸಧಾನ್ಯಗಳು, ಕಟ್ಟಡ ಸಾಮಾಗ್ರಿಗಳ ಬೆಲೆಯು ಹೆಚ್ಚಲಿದೆ. ಇದರಿಂದ ಸರ್ಕಾರ ಜನರನ್ನು ಸಂಕಷ್ಟಕ್ಕೆ ತಳ್ಳಿದಂತಾಗುತ್ತದೆ. ಅಗತ್ಯ ವಸ್ತುಗಳ ಬೆಲೆಗಳನ್ನು ಏರಿಸುವ ಮೂಲಕ ನಾವು ಸರ್ಕಾರ ನಡೆಸುತ್ತೇವೆಂದು ಹೊರಟಿರುವ ಕಾಂಗ್ರೇಸ್ ಸರ್ಕಾರ ಬಡಜನರ ಬದುಕಿನ ಜೊತೆಗೆ ಚಲ್ಲಾಟವಾಡುತ್ತಿದೆ. ಕೂಡಲೇ ಸರ್ಕಾರ ತೈಲ ದರ ಏರಿಕೆಯನ್ನು ಹಿಂಪಡೆಯಬೇಕು. ಇಲ್ಲದ್ದಿದ್ದರೆ ಹೋರಾಟ ಅನಿವಾರ್ಯವೆಂದು ಸರ್ಕಾರವನ್ನು ಎಚ್ಚರಿಸಿದರು.



ಮಂಡಳಾಧ್ಯಕ್ಷ ಬಸವರಾಜ ಪರವಣ್ಣವರ ಪ್ರಾಸ್ತಾವಿಕವಾಗಿ ಮಾತನಾಡಿದರು. ನಂತರ ಪ್ರತಿಭಟನೆಕಾರರು ತಹಶೀಲ್ದಾರ ಕಛೇರಿಗೆ ತೆರಳಿ ತಹಶೀಲ್ದಾರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಮನವಿ ಸ್ವೀಕರಿಸಿ ತಹಶೀಲ್ದಾರ ರವೀಂದ್ರ ಹಾದಿಮನಿ ಮಾತನಾಡಿ ನಿಮ್ಮ ಬೇಡಿಕೆ ಮನವಿಯನ್ನು ಸರ್ಕಾರಕ್ಕೆ ಕಳಿಸಲಾಗುವುದೆಂದರು. ಈ ವೇಳೆ ಬಿಜೆಪಿ ಮಹಿಳಾ ಅಧ್ಯಕ್ಷ ಸರಸ್ವತಿ ಹೈಬತ್ತಿ, ಉಮಾದೇವಿ ಬಿಕ್ಕಣ್ಣವರ, ಚನ್ನಬಸಪ್ಪ ಮೊಕಾಶಿ, ನಿಜಲಿಂಗಯ್ಯ ಹಿರೇಮಠ, ಬಸನಗೌಡ ಸಿದ್ರಾಮನಿ, ಬಸವರಾಜ ಪುಟ್ಟಿ, ಕಿರಣ ಪಾಟೀಲ, ಸಂದೀಪ ದೇಶಪಾಂಡೆ, ಹಾಲಿ–ಮಾಜಿ ಪಪಂ,ಜಿಪಂ,ತಾಪಂ,ಗ್ರಾಪಂ ಸದಸ್ಯರು, ಕ್ಷೇತ್ರದ ಮುಖಂಡರು, ನೇಸರಗಿ–ಕಿತ್ತೂರು ಬಿಜೆಪಿ–ಜೆಡಿಎಸ್ ಕಾರ್ಯಕರ್ತರು, ವಿವಿಧ ಗ್ರಾಮಗಳ ಸಾರ್ವಜನಿಕರು ಇನ್ನಿತರರಿದ್ದರು.

# ಡಾ. ಸರೋಜಿನಿ ಮಹಿಷಿ ವರದಿ ಜಾರಿಗೆ ಆಗ್ರಹಿಸಿ ಪ್ರತಿಭಟನೆ

ಹುಬ್ಬಳ್ಳಿ:–

ಡಾ. ಸರೋಜಿನಿ ಮಹಿಷಿ ವರದಿ ಜಾರಿಗೊಳಿಸುವಂತೆ ಒತ್ತಾಯಿಸಿ, ನಮ್ಮ ಕರ್ನಾಟಕ ಸೇವೆಯ ಪದಾಧಿಕಾರಿಗಳಿಂದ ನಗರದಲ್ಲಿ ಪ್ರತಿಭಟನೆ ನಡೆಸಿ ನಂತರ ತಹಶೀಲ್ದಾರ್ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಪ್ರತಿಭಟನೆ ನೇತೃತ್ವ ವಹಿಸಿದ್ದ ಸೇನೆಯ ಉತ್ತರ ಕರ್ನಾಟಕ ಅಧ್ಯಕ್ಷ ಅಮೃತ ಇಜಾರಿ ಮಾತನಾಡಿ, ರಾಜ್ಯದಲ್ಲಿ ಕನ್ನಡಿಗರು ಪರಕೀಯರಂತೆ ಜೀವನ ನಡೆಸುತ್ತಿದ್ದಾರೆ. ರಾಜ್ಯದ ಸಕಲ ಸವಲತ್ತುಗಳನ್ನು ಬಳಸಿಕೊಳ್ಳುವ ಉದ್ಯಮಿಗಳು ಸ್ಥಳೀಯರಿಗೆ ಕೆಲಸ ಕೊಡುವುದರಲ್ಲಿ ನಿರಾಸಕ್ತಿ ತೋರುತ್ತಿದ್ದಾರೆ ಎಂದು ದೂರಿದರು.

ಕನ್ನಡಿಗರು ಕರ್ನಾಟಕದಲ್ಲಿ ಹುದ್ದೆಗಳಿಗಾಗಿ ಅಲೆದಾಡುವ ಸ್ಥಿತಿ ನಿರ್ಮಾಣವಾಗಿದೆ. ಇದಕ್ಕೆಲ್ಲ ಪರಿಹಾರವಾಗಬೇಕಿದ್ದ ಡಾ। ಸರೋಜಿನಿ ಮಹಿಷಿ ವರದಿ 1986ರಿಂದ ಇಂದಿನವರೆಗೂ ಜಾರಿಯಾಗದೇ ವರದಿ ಪುಟಗಳು ಧೂಳು ತಿನ್ನುತ್ತಿವೆ. 1986ರ ನಂತರ ಬಂದ ಸರಕಾರಗಳು ಮಹಿಷಿ ವರದಿ ಜಾರಿಗೊಳಿಸದೇ ನಿರ್ಲಕ್ಷ್ಯವಹಿಸಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಡಾ। ಸರೋಜಿನಿ ಮಹಷಿ ವರದಿ ಜಾರಿಯಾದರೇ ಉದ್ಯಮಿಗಳಿಗೆ ಭೂಮಿ ನೀಡಿದ ರೈತ ಕುಟುಂಬಗಳಿಗೆ ಉದ್ಯೋಗ ದೊರೆಯುತ್ತದೆ. ರೈತರ ಆತ್ಮಹತ್ಯೆ ಪ್ರಕರಣಗಳು ತಡೆಯಬಹುದಾಗಿದೆ. ರೈತ ಕುಟುಂಬಗಳು ಇಂದು ಬೀದಿಗಿಳಿದು ಉದ್ಯೋಗಕ್ಕಾಗಿ ಹೋರಾಟ ನಡೆಸುತ್ತಿದ್ದರೂ, ಸರಕಾರ ಗಮನ ಹರಿಸುತ್ತಿಲ್ಲ. ಕೂಡಲೇರೈತ ಕುಟುಂಬಗಳಿಗೆ ಷರತ್ತು ರಹಿತವಾಗಿ ಉದ್ಯೋಗ ನೀಡಲು ಸೂಚಿಸಬೇಕು. ಡಾ। ಮಹಿಷಿ ವರದಿ ಜಾರಿಗೊಳಿಸಿ ಶೇ. 70 ರಷ್ಟು ಕನ್ನಡಿಗರಿಗೆ ಉದ್ಯೋಗ ಮೀಸಲಾತಿ ನೀಡಬೇಕೆಂದು ಒತ್ತಾಯಿಸಿದರು.




ರಾಜ್ಯ, ಕೇಂದ್ರ ಸರಕಾರಗಳು ಕನ್ನಡಿಗರ ವಿಶೇಷ ಅಭಿವೃದ್ಧಿಗೆ ವಿಶೇಷ ಕಾಳಜಿ ವಹಿಸಬೇಕು. ಕನ್ನಡಿಗರಿಗೆ ವಿಶೇಷ ಸೌಲಭ್ಯಗಳನ್ನು ಜಾರಿಗೊಳಿಸುವಂತೆ ಆಗ್ರಹಿಸಿ ಮನವಿ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಧಾರವಾಡ ಜಿಲ್ಲಾಧ್ಯಕ್ಷ ಬಸವರಾಜ್ ದೇವರಮನಿ, ಜಿಲ್ಲಾ ಪ್ರಧಾನ ಸಂಚಾಲಕರಾದ ರಂಗನಾಥ ಕನಕಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಾಂಡುರಂಗ ಬಾಂಡಗೆ, ಜಿಲ್ಲಾ ಸಂಚಾಲಕರಾದ ಶೀತಲ ಮಲಗಾವಿ ಸೇರಿದಂತೆ ಮುಂತಾದವರು ಇದ್ದರು.

# ಜಲ–ನೆಲ ಸಂಪನ್ಮೂಲಗಳು ನಾಗರಿಕತೆಯ ಭದ್ರ ಬುನಾದಿ

ಧಾರವಾಡ:–

ಧಾರವಾಡ ವಾಲ್ಮಿ ಸಂಸ್ಥೆಯು ಸುಸ್ಥಿರ ಜಲ ಮತ್ತು ನೆಲ ನಿರ್ವಹಣೆಯ ಕ್ಷೇತ್ರದಲ್ಲಿ ದೇಶದಲ್ಲಿಯೇ ಆಶಾಕಿರಣವಾದ ಸಂಸ್ಥೆಯಾಗಿದೆ. ವಾಲ್ಮಿ ಸಂಸ್ಥೆಯು ಜಲ ಮತ್ತು ನೆಲ ಕುರಿತು ತರಬೇತಿ, ಸಂಶೋಧನೆ, ಸಮುದಾಯ ಸಂಘಟನೆ, ಜಲ ಜಾಗೃತಿ ಕುರಿತು ರಾಜ್ಯಕ್ಕೆ ಅಗಾಧ ಸೇವೆಯನ್ನು ನೀಡಿದೆ ಎಂದು ಪುಣೆಯ ರಾಷ್ಟ್ರೀಯ ಜಲ ಅಕೆಡೆಮಿ ನಿರ್ದೇಶಕ ಇಂ. ಮಿಲಿಂದ ಪಾನಪಾಟೀಲ ಅವರು ಹೇಳಿದರು.




ಅವರು ವಾಲ್ಮಿ ಸಭಾಂಗಣದಲ್ಲಿ ಆಯೋಜಿಸಲಾದ 39 ನೇ ವಾಲ್ಮಿ ಸಂಸ್ಥಾಪನಾ ದಿನಾಚರಣೆಯನ್ನು ಉದ್ಘಾಟಿಸಿ, ಮಾತನಾಡಿದರು.

ಜಲ ಮತ್ತು ನೆಲ ಸಂಪನ್ಮೂಲಗಳು ನಾಗರಿಕತೆಯ ಭದ್ರ ಬುನಾದಿಯಾಗಿವೆ. ಜನ ಸಂಖ್ಯಾ ಬೆಳವಣಿಗೆ, ನಗರೀಕರಣ ಮತ್ತು ಇತ್ತೀಚಿನ ಹವಾಮಾನ ವೈಪರಿತ್ಯದ ಹಿನ್ನೆಲೆಯಲ್ಲಿ ಜಲ, ನೆಲ ನಿರ್ವಹಣೆ ಅತ್ಯಂತ ಪ್ರಮುಖ ಸವಾಲಾಗಿದೆ. ಈ ನಿಟ್ಟಿನಲ್ಲಿ ಧಾರವಾಡ ವಾಲ್ಮಿಯು ರಾಷ್ಟದ ನೈಸರ್ಗಿಕ ಸಂಪನ್ಮೂಲ ಅಭಿವೃದ್ಧಿ ಕಾರ್ಯ ಸೂಚಿಗಳಲ್ಲಿ ಬಹುಮುಖ್ಯ ಪಾತ್ರ ವಹಿಸಿದೆ. ವಾಲ್ಮಿ ಸಂಸ್ಥೆಯು ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ, ಜಲ ಶಕ್ತಿ ಯೋಜನೆ, ಅಟಲ್ ಭೂ ಜಲ ಯೋಜನೆ, ರಾಷ್ಟ್ರೀಯ ಜಲ ಆಂದೋಲನ ಮುಂತಾದ ಕಾರ್ಯಕ್ರಮಗಳಲ್ಲಿ ಭಾಗವಹಿಸಿದೆ ಎಂದು ಅವರು ಹೇಳಿದರು.

ಮುಂಬರುವ ದಿನಗಳಲ್ಲಿ ಹವಾಮಾನ ವೈಪರೀತ್ಯದ ಪರಿಣಾಮಗಳು, ಜಲ ಸುಭದ್ರತೆ ಸುಸ್ಥಿರ ಭೂ ನಿರ್ವಹಣೆ, ತಂತ್ರಜ್ಞಾನ ಆವಿಷ್ಕಾರ ಮುಂತಾದ ವಿಷಯಗಳಲ್ಲಿ ವಿಶೇಷ ಪ್ರಯತ್ನಗಳ ಅವಶ್ಯಕತೆ ಇದೆ. ಪುಣೆಯ ರಾಷ್ಟ್ರೀಯ ಜಲ ಅಕೆಡೆಮಿ ವಿವಿಧ ಭಾಗೀದಾರರ ಸಾಮರ್ಥ್ಯವರ್ಧನೆಗೆ ಧಾರವಾಡದ ವಾಲ್ಮಿ ಜೊತೆಗೆ ಕೈಜೋಡಿಸಲು ಸಿದ್ಧವಾಗಿದೆ ಎಂದು ಅವರು ತಿಳಿಸಿದರು.

ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಅಕಾಡೆಮಿಯ ನಿರ್ದೇಶಕ ಡಾ. ಎಂ ಚಂದ್ರ ಪೂಜಾರಿ ಅವರು ಮಾತನಾಡಿ, ಕೃಷಿ ಮತ್ತು ಗ್ರಾಮೀಣ ಬದುಕು ಅತ್ಯಂತ ಕಠಿಣ ಸಮಸ್ಯೆಗಳನ್ನು ಎದುರಿಸುತ್ತಿದೆ.

ಇದಕ್ಕೆ ಮೂಲ ಕಾರಣ ಜಲ ಮತ್ತು ನೆಲ ಸಮಸ್ಯೆಯಾಗಿದೆ. ಜೊತೆಗೆ ಯುವಕರು ಕೃಷಿಯನ್ನು ತೊರೆಯುತ್ತಿರುವುದು ಕಳವಳಕಾರಿಯಾಗಿದೆ.

ಈ ಎಲ್ಲ ಸಮಸ್ಯೆಗಳು ಹವಾಮಾನ ವೈಪರಿತ್ಯದಿಂದ ಇನ್ನಷ್ಟು ಉಲ್ಬಣಗೊಂಡಿವೆ. ಜಲ, ನೆಲ ನಿರ್ವಹಣೆ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿಗಾಗಿ ಕೇವಲ ಸರ್ಕಾರಿ ಸಂಸ್ಥೆಗಳು ಶ್ರಮಿಸಿದರೆ ಸಾಧ್ಯವಾಗದು, ಇದು ಒಂದು ಜನಾಂದೋಲನವಾಗಿ ರೂಪುಗೊಳ್ಳಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ರಾಷ್ಟ್ರೀಯ ವಿಧಿ ವಿಜ್ಞಾನ ವಿಶ್ವವಿದ್ಯಾಲಯದ ನಿರ್ದೇಶಕ ಡಾ. ಮಂಜುನಾಥ ಘಾಟೆ, ಮಲಪ್ರಭಾ ಯೋಜನಾ ವಲಯದ ಮುಖ್ಯ ಅಭಿಯಂತರ ಅಶೋಕ ವಾಸನದ, ಆರ್ ನಾಗಣ್ಣ, ಜಲ ಸಂಪನ್ಮೂಲ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಭಿಯಂತರರು, ಕಾಡಾ ಇಲಾಖೆಯ ಅಧಿಕಾರಿಗಳು, ರೈತರು, ನೀರು ಬಳಕೆದಾರರ ಸಹಕಾರ ಸಂಘಗಳ ಮಹಾಮಂಡಳದ ಅಧ್ಯಕ್ಷರು, ಉಪಾಧ್ಯಕ್ಷರು, ನೀರಾವರಿ ನಿರ್ವಹಣೆಯ ಎಲ್ಲ ಭಾಗೀದಾರರು ಮತ್ತು ವಾಲ್ಮಿ ಸಂಸ್ಥೆಯ ಅಧಿಕಾರಿಗಳು, ಬೋಧಕರು, ಸಮಾಲೋಚಕರು ಮತ್ತು ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಯೋಗ ನಮ್ಮ ಋಷಿಗಳು ಜಗತ್ತಿಗೆ ನೀಡಿದ ಕೊಡುಗೆ

ಕಲಬುರಗಿ:–

ತಲೆಮಾರುಗಳಿಂದ ಭಾರತವು ಆರೋಗ್ಯ ಮತ್ತು ಔಷಧದ ಭಾಗವಾಗಿ ಯೋಗವನ್ನು ಅನುಸರಿಸುತ್ತಿದೆ. ಇದು ನಮ್ಮ ಋಷಿಗಳು ಜಗತ್ತಿಗೆ ನೀಡಿದ ಕೊಡುಗೆ–ಯಾಗಿದೆ" ಎಂದು ಸಿಯುಕೆಯ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಹೇಳಿದರು. ಅವರು ಇಂದು ಸಿಯುಕೆಯಲ್ಲಿ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದರು. ಅವರು ಮುಂದುವರೆದು ಮಾತನಾಡಿ "ಕಳೆದ ಹತ್ತು ವರ್ಷಗಳಿಂದ ಅಂತಾರಾಷ್ಟ್ರೀಯ ಮಟ್ಟದಲ್ಲಿ ಯೋಗ ದಿನವನ್ನು ಆಚರಿಸಲಾಗುತ್ತಿದೆ. ಇದು ಆರೋಗ್ಯ ನಿರ್ವಹಣೆಯ ಭಾಗವಾಗಿ ಯೋಗದ ಮಹತ್ವವನ್ನು ತೋರಿಸುತ್ತದೆ. ನಾವು ಸಂತೋಷ ಮತ್ತು ಆರೋಗ್ಯಕರವಾಗಿರಲು ದಿನ ನಿತ್ಯ ಯೋಗದ ಅಭ್ಯಾಸವನ್ನು ಮಾಡಬೇಕು. ವಿಶೇಷವಾಗಿ ಯುವಕರು ಪ್ರತಿದಿನ ಕನಿಷ್ಠ ಒಂದು ಗಂಟೆ ಯೋಗಾಭ್ಯಾಸಕ್ಕೆ ಮೀಸಲಿಡಬೇಕು. ಏಕೆಂದರೆ ಯುವಕರು ದೇಶದ ಆಸ್ತಿ, ಯುವಕರ ಆರೋಗ್ಯ ರಾಷ್ಟ್ರೀಯ ಆರೋಗ್ಯ. ನಾವು ಯೋಗಾಭ್ಯಾಸ ಮಾಡದಿದ್ದರೆ ಔಷಧಗಳ ಮೇಲೆ ಅವಲಂಬಿತರಾಗಬೇಕಾಗುತ್ತದೆ. ಯೋಗ ನಮ್ಮನ್ನು ದೈಹಿಕವಾಗಿ ಮತ್ತು ಮಾನಸಿಕವಾಗಿ ಆರೋಗ್ಯವಾಗಿರಿಸುತ್ತದೆ. ಸಾಂಕೇತಿಕವಾಗಿ ಒಂದು ದಿನ ಯೋಗಾಭ್ಯಾಸ ಮಾಡುವುದು ಸಾಕಾಗುವುದಿಲ್ಲ; ಪ್ರತಿದಿನ ಅದನ್ನು ಅಭ್ಯಾಸ ಮಾಡಲು ಇಂದು ನಾವು ಪ್ರತಿಜ್ಞೆ ಮಾಡಬೇಕು" ಎಂದು ಅವರು ಹೇಳಿದರು. ಕುಲಸಚಿವ ಪ್ರೊ.ಆರ್.ಆರ್.ಬಿರಾದಾರ ಮಾತನಾಡಿ, "ಹೃದಯಾಘಾತ, ಬಿಪಿ, ಶುಗರ್ ಸೇರಿದಂತೆ ಹಲವು ರೋಗಗಳನ್ನು ತಡೆಯುವ ಶಕ್ತಿ ಯೋಗಕ್ಕಿದೆ ಎಂದು ಅನೇಕ ತಜ್ಞರು ಹೇಳಿದ್ದಾರೆ. ಭಾರತೀಯ ಔಷಧ ಪದ್ಧತಿಯಲ್ಲಿ ವಿವಿಧ ಯೋಗಗಳಿವೆ ಮತ್ತು ಅಷಾಂಗ ಯೋಗವು ಒಂದಾಗಿದೆ. ನಾವು ಯೋಗವನ್ನು ದಿನನಿತ್ಯದ ಅಭ್ಯಾಸವನ್ನಾಗಿ ಮಾಡಿಕೊಳ್ಳಬೇಕು ಮತ್ತು ನಮ್ಮನ್ನು ಆರೋಗ್ಯವಾಗಿ ಮತ್ತು ಸಂತೋಷದಿಂದ ಇಟ್ಟುಕೊಳ್ಳಬೇಕು" ಎಂದು ಅವರು ಹೇಳಿದರು. ಇದಕ್ಕೂ ಮುನ್ನ ವಿದ್ಯಾರ್ಥಿ ಕಲ್ಯಾಣಾಧಿಕಾರಿ ಡಾ.ಬಸವರಾಜ ಕುಬಕಡ್ಡಿ ಸ್ವಾಗತಿಸಿ ಮಾತನಾಡಿ, ನಮ್ಮ ಗೌರವಾನ್ವಿತ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಕೋರಿಕೆಯ ಮೇರೆಗೆ ವಿಶ್ವಸಂಸ್ಥೆಯು ಜೂನ್ 21ನ್ನು ಅಂತಾರಾಷ್ಟ್ರೀಯ ಯೋಗ ದಿನವನ್ನಾಗಿ ಅಂಗೀಕರಿಸಿದ್ದು, ಜಗತ್ತಿನಾದ್ಯಂತ 177 ರಾಷ್ಟಗಳು ಈ ದಿನವನ್ನು ಆಚರಿಸುತ್ತಿವೆ.

# ಕಾಯ್ದೆ ಪರಿಣಾಮಕಾರಿ ಅನುಷ್ಠಾನಕ್ಕೆ ಸೂಚನೆ



ಗದಗ:–

ಜಿಲ್ಲೆಯಲ್ಲಿ ಕೊಟ್ಪಾ ಕಾಯ್ದೆ ಪರಿಣಾಮ ಕಾ–ರಿಯಾಗಿ ಅನುಷ್ಠಾನವಾಗಬೇಕು. ಕೊಟ್ಪಾ ಕಾಯ್ದೆ ಉಲ್ಲಂಘನೆಯಾದಲ್ಲಿ ಅಂತಹ ಅಂಗಡಿಗಳ ಪರವಾನಿಗೆಯನ್ನು ರದ್ದು ಗೊಳಿಸಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ತಿಳಿಸಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ತಂಬಾಕು ನಿಷೇಧ ಕೋಶದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕೋಟ್ಪಾ–2003 ಇನ್ನಷ್ಟು ಪರಿ ಣಾಮ ಕಾರಿಯಾಗಿ ಅನುಷ್ಠಾನಗೊಳಿಸಲು, ಶಾಲಾ/ಕಾಲೇಜು ಹಾಗೂ ಶಿಕ್ಷಣ ಸಂಸ್ಥೆಗಳ ಆವರಣದಿಂದ 100 ಗಜದವರೆಗೆ ತಂಬಾಕು ಮಾರಾಟ ಮಾಡುವುದು, ಅಂಗಡಿಗಳ ವಿರುದ್ಧ ಕಠಿಣ ಕಾನೂನು ರೀತಿ ಕ್ರಮ ಕೈಗೊಂಡು ತಂಬಾಕು ಮಾರಾಟ ಮಾಡುವುದನ್ನು ನಿಷೇಧಿಸಬೇಕು.. ಎಲ್ಲಾ ಅಂಗಡಿ ಮುಂ ಗಟ್ಟುಗಳ ಮುಂದೆ ಧೂಮಪಾನ ನಿಷೇಧ ಹಾಗೂ 18 ವರ್ಷದೊಳಗಿನ ತಂಬಾಕು ನಿಷೇಧ ಕುರಿತ ನಾಮಫಲಕ ಬಿತ್ತರಿಸುವುದು. ಅಂಗಡಿ ಮಾಲಿಕರ ಸ್ಥಳದ ಮುಖ್ಯಸ್ಥರ ಜಾವಾಬ್ದಾರಿಯೂ ಆಗಿರುತ್ತದೆ. ತಂಬಾಕು ಉತ್ಪನ್ನಗಳನ್ನು ಬಿಡಿ ಬಿಡಿಯಾಗಿ ಮಾರಾಟ ಮಾಡುವುದು ಹಾಗೂ ಇತರೆ ಕೋಟ್ಪಾ ಕಾಯ್ದೆ ಉಲ್ಲಂಘನೆಯಾದಲ್ಲಿ ಅಂತಹ ಅಂಗಡಿಗಳ ಪರವಾನಿಗೆಯನ್ನು ರದ್ದುಗೊಳಿಸಿ ಕಾನೂನು ರೀತಿ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಎನ್.ಟಿ.ಸಿ.ಪಿ. ಕಾರ್ಯಕ್ರಮಾಧಿಕಾರಿ ಡಾ.ವೆಂಕಟೇಶ ರಾಥೋಡ್ ಅವರು ಮಾತನಾಡಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಗದಗದಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳ ಕುರಿತು ವಿವರಿಸುತ್ತಾ ಜಿಲ್ಲೆಯಲ್ಲಿ ಕಳೆದ ವರ್ಷ ಒಟ್ಟು100 ಶಾಲಾ/ಕಾಲೇಜುಗಳಲ್ಲಿ ತಂಬಾಕು ವ್ಯಸನದಿಂದಾಗುವ ದುಷ್ಪರಿಣಾಮ ಹಾಗೂ ಕೋಟ್ಪಾ ಕಾಯ್ದೆ ಕುರಿತು ಶಿಕ್ಷಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಆರೋಗ್ಯ ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಶಾಲಾ/ಕಾಲೇಜುಗಳ ಮುಖ್ಯಸ್ಥರ ಅಧ್ಯ ಕ್ಷತೆಯಲ್ಲಿ ತಂಬಾಕು ನಿಯಂತ್ರಣ ಸಮಿತಿ ರಚನೆ ಮಾಡಲಾಗಿದೆ. ಕೋಟ್ಪಾ ದಾಳಿ ಹಮ್ಮಿಕೊಳ್ಳುವುದರ ಮೂಲಕ ವ್ಯಾಪಾ ರಸ್ಥರು, ತಂಬಾಕು ಬಳಕೆದಾರರಿಗೆ ಹಾಗೂ ಸಾರ್ವಜನಿಕರಲ್ಲಿ ಕೋಟ್ಪಾ ಕಾಯ್ದೆ ಕುರಿತು ಜಾಗೃತಿ ಮೂಡಿಸಲಾಗಿದೆ. ಕೋಟ್ಪಾ ಕಾಯ್ದೆ ಉಲ್ಲಂಘನೆ ವಿರುದ್ಧ ಕ್ರಮ ಕೈಗೊಂಡು ಈವರೆಗೆ 52 ಕೋಟ್ಪಾ ದಾಳಿ ನಡೆಸಿ 569 ಪ್ರಕರಣಗಳನ್ನು ದಾಖಲಿಸಿ ರೂ.90210/– ದಂಡ ಸಂಗ್ರಹಿಸಲಾಗಿದೆ. ಕೋಟ್ಪಾ ಅನುಷ್ಠಾನ ಕುರಿತು ವಿವಿಧ ಇಲಾಖೆಗಳ ಅಧಿಕಾರಿ ಸಿಬ್ಬಂದಿಗಳಿಗೆ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳ ಲಾಗಿದೆ. ಜಿಲ್ಲಾತಂಬಾಕು ವ್ಯಸನ ಮುಕ್ತ ಕೇಂದ್ರದ ಮೂಲಕ ಈ ವರ್ಷಒಟ್ಟು 1777ಅರ್ಥಿಗಳಿಗೆ ಆಪ್ತ ಸಮಾಲೋಚನೆ ಮಾಡಲಾಗಿದೆ.ಅದೇರೀತಿ ಸಮುದಾಯ ಮಟ್ಟದಲ್ಲಿ ಕೇಂದ್ರಕೃತ ಗುಂಪು ಚರ್ಚೆಯ ಮೂಲಕ ಒಟ್ಟು 48ಎಫ್.ಜಿ.ಡಿ.ಕಾರ್ಯಕ್ರಮ ಮಾಡಲಾಗಿದೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಆರೋಗ್ಯ ಇಲಾಖೆಯ ಬಿತ್ತಿಪತ್ರವನ್ನು ಬಿಡುಗಡೆ ಮಾಡಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾದಿಕಾರಿ ಭರತ್ ಎಸ್, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ಕೆ. ಭಜಂತ್ರಿ, ಜಿಲ್ಲಾಆರ್.ಸಿ.ಎಚ್.ಅಧಿಕಾರಿ ಡಾ.ಮೀನಾಕ್ಷಿ, ಜಿಲ್ಲಾ ಕ್ಷಯರೋಗ ನಿರ್ಮೂ ಲನಾಧಿಕಾರಿ ಡಾ.ಅರುಂಧತಿ ಕುಲಕರ್ಣೀ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಬಿ.ಸಿ.ಕರಿಗೌಡ್ರ, ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ. ರಾಜೇಂದ್ರ ಬಸರಿಗೀಡದ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ, ತಾಲೂಕು ಆರೋಗ್ಯಾಧಿಕಾರಿಗಳು, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಲಹೆಗಾರರಾದ ಗೋಪಾಲ ಸುರಪುರ, ಮತ್ತಿತರರು ಇದ್ದರು.

Editor:S.K.Wadeyar,#378/379, “MAYAGAPPA COMPLEX” 1st Stage 6th Phase Industrial Town west of chord Road Rajajinagar Bengaluru-560044.Karnataka.
Publisher:S.K.Wadeyar,#378/379, “MAYAGAPPA COMPLEX” 1st Stage 6th Phase Industrial Town west of chord Road Rajajinagar Bengaluru-560044.Karnataka.
Printer:SUCHITHRA PRINTER’s & PUBLISHER’s,#378/379, “MAYAGAPPA COMPLEX” 1se Stage 6th Phase Industrial Town west of chord Road Rajajinagar Bengaluru-560044.Karnataka.
Owner:S.K.Wadeyar,#378/379, “MAYAGAPPA COMPLEX” 1se Stage 6th Phase Industrial Town west of chord Road Rajajinagar Bengaluru-560044.Karnataka.